# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 219 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 18–03–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 219 | Title- Code: KARKAN 28269 | Chitradurga | Date: 18-03-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು
ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಕಡ್ಡಾಯ: ಡಿಸಿ 2
ನಾಯಕನಹಟ್ಟಿ ಜಾತ್ರೆ: ವಸ್ತು ಪ್ರದರ್ಶನ ಕಾರ್ಯಕ್ರಮ ವ್ಯವಸ್ಥಿತವಾಗಿರಲಿ: ಎಸಿ 3
ಚಿತ್ರದುರ್ಗ ಲೋಕಸಭಾ ಕ್ಷೇತ್ರ ಒಂದು ಹಿನ್ನೋಟ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಮಾ. 28 ರಂದು ಅಧಿಸೂಚನೆ, ಎ. 26 ರಂದು ಮತದಾನ, ಜೂ. 04 ಕ್ಕೆ ಮತ ಎಣಿಕೆ

# ಲೋಕ ಚುನಾವಣಾ ವೇಳಾಪಟ್ಟಿ ಪ್ರಕಟ

## ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಕಲ ಸಿದ್ಧತೆ, ತಕ್ಷಣದಿಂದಲೇ ನೀತಿ ಸಂಹಿತೆ ಜಾರಿ

## ಮುಕ್ತ ನ್ಯಾಯ ಸಮ್ಮತ ಚುನಾವಣೆ, ಅಕ್ರಮಗಳಿಗೆ ಕಡಿವಾಣ: ಜಿಲ್ಲಾಧಿಕಾರಿ ಟಿ.ವೆಂಕಟೇಶ್

» ಚಿತ್ರದುರ್ಗ

ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆ 2ನೇ ಹಂತದಲ್ಲಿ ನಡೆಯಲಿದೆ. ತಕ್ಷಣದಿಂದಲೇ ಮಾದರಿ ಚುನಾವಣೆ ನೀತಿ ಸಂಹಿತೆ ಜಾರಿಗೊಳಿಸಲಾಗಿದೆ. ಚುನಾವಣೆಗೆ ಜಿಲ್ಲೆಯಲ್ಲಿ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆ ನಡೆಸಲು, ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಬಿಗಿ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ಘೋಷಣೆ ಹಾಗೂ ಮಾದರಿ ನೀತಿ ಸಂಹಿತೆ ಜಾರಿ ಕುರಿತು ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಭಾರತ ಚುನಾವಣಾ ಆಯೋಗ ಲೋಕಸಭಾ ಚುನಾವಣೆಗೆ ವೇಳಾಪಟ್ಟಿ ಬಿಡುಗಡೆ ಮಾಡಿದೆ. ಇದರಂತೆ ಇದೇ ಮಾರ್ಚ್ 28 ಗುರುವಾರದಂದು ಅಧಿಸೂಚನೆ ಹೊರಡಿಸಲಾಗುವುದು. ಏಪ್ರಿಲ್ 04 ರಂದು ಗುರುವಾರ ನಾಮಪತ್ರ ಸಲ್ಲಿಸಲು ಕಡೆಯ ದಿನವಾಗಿದೆ. ಏಪ್ರಿಲ್ 05 ರಂದು ಶುಕ್ರವಾರ ನಾಮಪತ್ರ ಪರಿಶೀಲನೆ ನಡೆಸಲಾಗುವುದು. ಏಪ್ರಿಲ್ 08 ರಂದು ಸೋಮವಾರ ನಾಮಪತ್ರ ಹಿಂಪಡೆಯುಲು ಕೊನೆಯ ದಿನ. ಏಪ್ರಿಲ್ 26 ರಂದು ಶುಕ್ರವಾರ ಮತದಾನ ನಡೆಯಲಿದೆ. ಜೂನ್ 04 ರಂದು ಮಂಗಳವಾರ ಮತಗಳ ಎಣಿಕೆ ನಡೆಯಲಿದೆ. ಜೂನ್ 6ರಂದು ಗುರುವಾರ ಚುನಾವಣೆ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದರು.

ಚಿತ್ರದುರ್ಗ (ಪರಿಶಿಷ್ಟ ಜಾತಿ) ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಜಿಲ್ಲೆಯ ಮೊಳಕಾಲ್ಮುರು, ಚಳ್ಳಕೆರೆ, ಚಿತ್ರದುರ್ಗ, ಹಿರಿಯೂರು, ಹೊಸದುರ್ಗ, ಹೊಳಲ್ಕೆರೆ ಹಾಗೂ ತುಮಕೂರು ಜಿಲ್ಲೆಯ ಸಿರಾ ಮತ್ತು ಪಾವಗಡ ಸೇರಿದಂತೆ ಒಟ್ಟು 8 ವಿಧಾನಸಭಾ ಕ್ಷೇತ್ರಗಳು ಇರುತ್ತವೆ ಎಂದರು.

**2167 ಮತಗಟ್ಟೆಗಳು:** ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳು ಹಾಗೂ ತುಮಕೂರು ಜಿಲ್ಲೆಯ ಸಿರಾ ಮತ್ತು ಪಾವಗಡ ವಿಧಾನಸಭಾ ಕ್ಷೇತ್ರಗಳು ಸೇರಿದಂತೆ ಒಟ್ಟು 2167 ಮತಗಟ್ಟೆಗಳು ಇವೆ. ಜಿಲ್ಲೆಯ ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರದಲ್ಲಿ 285 ಮತಗಟ್ಟೆಗಳು, ಚಳ್ಳಕೆರೆ–260, ಚಿತ್ರದುರ್ಗ–288, ಹಿರಿಯೂರು–287, ಹೊಸದುರ್ಗ–242, ಹೊಳಲ್ಕೆರೆ–299 ಸೇರಿದಂತೆ ಚಿತ್ರದುರ್ಗ ಜಿಲ್ಲೆಯಲ್ಲಿ 1661 ಮತಗಟ್ಟೆಗಳು ಇವೆ. ತುಮಕೂರು ಜಿಲ್ಲೆಯ ಶಿರಾ ವಿಧಾನಸಭಾ ಕ್ಷೇತ್ರದಲ್ಲಿ 266 ಮತಗಟ್ಟೆಗಳು ಹಾಗೂ ಪಾವಗಡ ವಿಧಾನಸಭಾ ಕ್ಷೇತ್ರದಲ್ಲಿ 240 ಮತಗಟ್ಟೆಗಳು ಇವೆ ಎಂದು ತಿಳಿಸಿದರು.

ಚುನಾವಣಾ ದೂರುಗಳಿಗೆ ಟೋಲ್ ಫ್ರೀ ಸಂಖ್ಯೆ 1950: ಸಾರ್ವಜನಿಕರು ಚುನಾವಣೆ ಪ್ರಕ್ರಿಯೆ ಸಂಬಂಧಿಸಿದಂತೆ ಯಾವುದೇ ಮಾಹಿತಿ ಮತ್ತು ದೂರುಗಳಿದ್ದಲ್ಲಿ ಮತದಾರರ ಟೋಲ್ ಫ್ರೀ ಸಂಖ್ಯೆ 1950 ಗೆ ಸಂಪರ್ಕಿಸಬಹುದು. ಅಲ್ಲದೇ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾದಲ್ಲಿ ಸಾರ್ವಜನಿಕರು ದೂರುಗಳನ್ನು ಸಿ–ವಿಜಿಲ್ ಮೊಬೈಲ್ ಆಪ್ ಮೂಲಕವೂ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಎಲ್ಲಾ ಮತಗಟ್ಟೆಗಳಿಗೆ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕುಡಿಯುವ ನೀರು, ವಿದ್ಯುತ್, ನೆರಳಿನ ವ್ಯವಸ್ಥೆ ಹಾಗೂ ಅಂಗವಿಕಲರಿಗೆ ರ್ಯಾಂಪ್ ವ್ಯವಸ್ಥೆ ಮಾಡಲಾಗಿದೆ. ಇವಿಎಂ ಮತ್ತು ವಿವಿ ಪ್ಯಾಟ್ ಸಾಗಾಣೆ ಮಾಡುವ ವಾಹನಗಳಿಗೆ ಜಿ.ಪಿ.ಎಸ್ ಅಳವಡಿಸಿ ಅವುಗಳ ಚಲನ ವಲನಗಳನ್ನು ಮೇಲ್ವಿಚಾರಣೆ ಮಾಡಲಾಗುವುದು. ಧ್ವನಿವರ್ಧಕಗಳನ್ನು ರಾತ್ರಿ 10 ರಿಂದ 6 ರವರೆಗೆ ಉಪಯೋಗಿಸುವಂತಿಲ್ಲ ಎಂದು ಹೇಳಿದರು.

ಅಭ್ಯರ್ಥಿಗಳು ಮತ್ತು ರಾಜಕೀಯ ಪಕ್ಷಗಳು ಪ್ರಚಾರಕ್ಕಾಗಿ ಪರಿಸರ ಸ್ನೇಹಿ ಪರಿಕರಗಳು (ಪೋಸ್ಟರ್ಸ್, ಬ್ಯಾನರ್ಸ್, ಬಂಟಿಂಗ್ಸ್) ಮಾತ್ರ ಬಳಸಬೇಕು. ಇವಿಎಂ ಬಗ್ಗೆ ಮತದಾರರಲ್ಲಿ ಮತಗಟ್ಟೆವಾರು ಅರಿವು ಮತ್ತು ಜಾಗೃತಿ ಮೂಡಿಸಲಾಗಿದೆ. 2014ರಲ್ಲಿ ಶೇ.66 ರಷ್ಟು ಮತದಾನವಾಗಿತ್ತು. 2019ರಲ್ಲಿ ಶೇ.70.64 ರಷ್ಟು ಮತದಾನವಾಗಿತ್ತು. ಈ ಬಾರಿಯೂ ಇನ್ನೂ ಹೆಚ್ಚಿನ ಮತದಾನಕ್ಕೆ ಕ್ರಮ ವಹಿಸಲಾಗಿದ್ದು, ಸ್ವೀಪ್ ಅಡಿ ಮತದಾರಲ್ಲಿ ಮತದಾನ ಮಾಡುವ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಎಲ್ಲರೂ ತಪ್ಪದೇ ಮತ ಚಲಾಯಿಸಬೇಕು ಎಂದು ಮನವಿ ಮಾಡಿದ ಜಿಲ್ಲಾಧಿಕಾರಿಗಳು, ಮತದಾನ ಹೆಚ್ಚಳಕ್ಕೆ ಎಲ್ಲ ರೀತಿಯ ಕ್ರಮವಹಿಸಲಾಗಿದೆ ಎಂದರು.ಜಿಲ್ಲೆಯಲ್ಲಿ 85 ವರ್ಷ ಮೇಲ್ಪಟ್ಟ 11,650 ಮತದಾರರು ಹಾಗೂ 24,750 ವಿಕಲಚೇತನ ಮತದಾರರನ್ನು ಗುರುತಿಸಲಾಗಿದ್ದು, ಅಂತಹವರ ಮನೆಗೆ ತೆರಳಿ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ ಎಂದರು.ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂಧರ್ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಅಬಕಾರಿ ಉಪ ಆಯುಕ್ತ ಡಾ.ಬಿ.ಮಾದೇಶ್ ಇದ್ದರು.



### ಸಹಾಯಕ ಚುನಾವಣಾಧಿಕಾರಿಗಳ ವಿವರ

ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರ (ಎಸ್‌ಟಿ) ಸಹಾಯಕ ಚುನಾವಣಾಧಿಕಾರಿಯಾಗಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಬಸನಗೌಡ ಕೋಟೂರ, ಚಳ್ಳಕೆರೆ ವಿಧಾನಸಭಾ ಕ್ಷೇತ್ರ (ಎಸ್‌ಟಿ) ಸಹಾಯಕ ಚುನಾವಣಾಧಿಕಾರಿಯಾಗಿ ಜಿಲ್ಲಾ ಕೈಗಾರಿಕೆ ಕೇಂದ್ರದ ಜಂಟಿ ನಿರ್ದೇಶಕ ಬಿ.ಆನಂದ್, ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ಸಹಾಯಕ ಚುನಾವಣಾಧಿಕಾರಿಯಾಗಿ ಉಪವಿಭಾಗಾಧಿಕಾರಿ ಎಂ.ಕಾರ್ತೀಕ್. ಹಿರಿಯೂರು ವಿಧಾನಸಭಾ ಕ್ಷೇತ್ರ ಸಹಾಯಕ ಚುನಾವಣಾಧಿಕಾರಿಯಾಗಿ ಎನ್.ಹೆಚ್–48 ವಿಶೇಷ ಭೂಸ್ವಾಧೀನಾಧಿಕಾರಿ ಹೆಚ್.ಎನ್.ಶಿವೇಗೌಡ, ಹೊಸದುರ್ಗ ವಿಧಾನಸಭಾ ಕ್ಷೇತ್ರ ಸಹಾಯಕ ಚುನಾವಣಾಧಿಕಾರಿಯಾಗಿ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್. ಹೊಳಲ್ಕೆರೆ ವಿಧಾನಸಭಾ ಕ್ಷೇತ್ರ (ಎಸ್‌ಸಿ) ಸಹಾಯಕ ಚುನಾವಣಾಧಿಕಾರಿಯಾಗಿ ಭದ್ರಾ ಮೇಲ್ದಂಡೆ ಯೋಜನೆ ವಿಶೇಷ ಭೂಸ್ವಾಧೀನಾಧಿಕಾರಿ ಟಿ.ವಿವೇಕಾನಂದ ಹಾಗೂ ತುಮಕೂರು ಜಿಲ್ಲೆಯ ಶಿರಾ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಯಾಗಿ ಕೆಐಎಡಿಬಿ ವಿಶೇಷ ಭೂ ಸ್ವಾಧೀನಾಧಿಕಾರಿ ಸೋಮಪ್ಪ ಕಡಕೋಳ, ಪಾವಗಡ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಯಾಗಿ ತುಮಕೂರು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ– ನರಸಿಂಹಮೂರ್ತಿ ಕಾರ್ಯನಿರ್ವಹಿಸುವರು ಎಂದು ತಿಳಿಸಿದರು.

### 18,41,937 ಮಂದಿ ಮತದಾರರು

ಜಿಲ್ಲೆಯಲ್ಲಿ ಆರು ವಿಧಾನಸಭಾ ಕ್ಷೇತ್ರಗಳಿಂದ ಜಿಲ್ಲೆಯಲ್ಲಿ ಒಟ್ಟು 14,18,211 ಮತದಾರರು ಇದ್ದಾರೆ. ಇದರಲ್ಲಿ 704896 ಪುರುಷ ಮತದಾರರು, 713228 ಮಹಿಳಾ ಮತದಾರರು ಹಾಗೂ 87 ಮಂದಿ ಇತರೆ ಮತದಾರರು ಇದ್ದಾರೆ. ತುಮಕೂರು ಜಿಲ್ಲೆಯ ಸಿರಾ ವಿಧಾನ ಕ್ಷೇತ್ರದಲ್ಲಿ 113788 ಪುರುಷರು ಹಾಗೂ 112898 ಮಹಿಳಾ ಮತದಾರರು ಹಾಗೂ 8 ಇತರೆ ಮತದಾರರು ಸೇರಿದಂತೆ ಒಟ್ಟು 226694 ಮತದಾರರು ಇದ್ದಾರೆ. ಪಾವಗಡ ವಿಧಾನ ಸಭಾ ಕ್ಷೇತ್ರದಲ್ಲಿ 100380 ಪುರುಷ ಮತದಾರರು, 96643 ಮಹಿಳಾ ಮತದಾರರು ಹಾಗೂ 9 ಇತರೆ ಮತದಾರರು ಸೇರಿದಂತೆ ಒಟ್ಟು 197032 ಮತದಾರರು ಇದ್ದಾರೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳು ಹಾಗೂ ತುಮಕೂರು ಜಿಲ್ಲೆಯ ಸಿರಾ ಮತ್ತು ಪಾವಗಡ ವಿಧಾನಸಭಾ ಕ್ಷೇತ್ರಗಳು ಸೇರಿದಂತೆ ಒಟ್ಟು 18,41,937 ಮತದಾರರು ಇದ್ದಾರೆ. ಇದರಲ್ಲಿ 919064 ಪುರುಷರು ಹಾಗೂ 922769 ಮಹಿಳೆಯರು, 104 ಇತರೆ ಮತದಾರರು ಇದ್ದಾರೆ ಎಂದು ತಿಳಿಸಿದರು.

### 47 ಚೆಕ್‌ಪೋಸ್ಟ್ ಕಾರ್ಯನಿರ್ವಹಣೆ

ಚುನಾವಣಾ ಅಕ್ರಮ ತಡೆಗಾಗಿ ಜಿಲ್ಲೆಯಲ್ಲಿ 35 ಚೆಕ್‌ಪೋಸ್ಟ್ ಹಾಗೂ ಶಿರಾ ಹಾಗೂ ಪಾವಗಡದಲ್ಲಿ ತಲಾ 6 ಚೆಕ್‌ಪೋಸ್ಟ್ ಸ್ಥಾಪನೆ ಸೇರಿದಂತೆ ಒಟ್ಟು 47 ಚೆಕ್‌ಪೋಸ್ಟ್‌ಗಳು ಕಾರ್ಯನಿರ್ವಹಣೆ ಮಾಡಲಿವೆ ಎಂದು ತಿಳಿಸಿದ ಅವರು, ಜಿಲ್ಲೆಯ ಹೊರರಾಜ್ಯದೊಂದಿಗೆ ಗಡಿ ಪ್ರದೇಶಹೊಂದಿರುವುದರಿಂದಸತ್ಯಸಾಯಿ ಹಾಗೂ ಅನಂತಪುರ ಗಡಿಭಾಗದಲ್ಲಿ ಅಂತರ ರಾಜ್ಯ ಚೆಕ್‌ಪೋಸ್ಟ್‌ಗಳನ್ನು ಸ್ಥಾಪನೆ ಮಾಡಲಾಗಿದೆ ಎಂದರು.

### ಇವಿಎಂ, ವಿವಿಪ್ಯಾಟ್ ದಾಸ್ತಾನು ವಿವರ

ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2167 ಮತಗಟ್ಟೆಗಳು ಇದ್ದು, 3952 ಬ್ಯಾಲೆಟ್ ಯುನಿಟ್, 2721 ಕಂಟ್ರೋಲ್ ಯುನಿಟ್ ಹಾಗೂ 2867 ವಿವಿ ಪ್ಯಾಟ್‌ಗಳ ದಾಸ್ತಾನು ಮಾಡಲಾಗಿದೆ. 47 ಎಸ್‌ಎಸ್‌ಟಿ ತಂಡಗಳು, 8 ವಿಎಸ್‌ಟಿ ತಂಡಗಳು, 8 ವಿವಿಟಿ ತಂಡಗಳು ಹಾಗೂ 31 ಎಫ್‌ಎಸ್‌ಟಿ ತಂಡಗಗಳನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದರು.

### 20 ಜನರು ಗಡಿಪಾರಿಗೆ ಸಿದ್ಧತೆ

ಲೋಕಸಭಾಚುನಾವಣೆಸಂಬಂಧಕಾನೂನು ಸುವ್ಯವಸ್ಥೆ ಹಾಗೂ ಚುನಾವಣಾ ಅಕ್ರಮ ತಡೆಯಲು ಪೊಲೀಸ್ ಇಲಾಖೆಯಿಂದ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಮುಂಜಾಗ್ರತ ಕ್ರಮವಾಗಿ ಜಿಲ್ಲೆಯಲ್ಲಿ 1058 ಸಮಾಜ ವಿದ್ರೋಹಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. 596 ಜನರನ್ನು ತಹಶೀಲ್ದಾರರ ಮುಂದೆ ಹಾಜರು ಪಡಿಸಿ ವಶಕ್ಕೆ ಪಡೆಯಲಾಗಿದೆ. 20 ಜನರ ಗಡಿಪಾರಿಗೆ ವಿಭಾಗಾಧಿಕಾರಿಗಳ ಮುಂದೆ ವರದಿ ಸಲ್ಲಿಸಲಾಗಿದೆ. ಜಿಲ್ಲೆಗೆ ಪ್ಯಾರಾ ಮಿಲಿಟರ್ ಆಗಮಿಸಿದ ನಂತರ ಪ್ರತಿ ಹಳ್ಳಿಗಳಿಯೂ ಸಂಚರಿಸಿ ಜನಸಾಮಾನ್ಯರಲ್ಲಿಮತದಾನಕೈಗೊಳ್ಳಲು ವಿಶ್ವಾಸ ಹೆಚ್ಚಿಸಲಾಗುವುದು. ಈಗಾಗಲೇ ಜಿಲ್ಲೆಯ 35 ಚೆಕ್ ಪೋಸ್ಟ್‌ಗಳಲ್ಲಿ ಪೊಲೀಸ್ ಅಧಿಕಾರಿಗಳನ್ನು ನಿಯೋಜಿಲಾಗಿದೆ ಎಂದು ಎಸ್ಪಿ ಮೀನಾ ಹೇಳಿದರು.

## ಫಾಸ್ಟ್ ನ್ಯೂಸ್

### ಸಹಾಯವಾಣಿ ಪ್ರಾರಂಭ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕಿನಲ್ಲಿ ಕುಡಿಯುವ ನೀರು ಹಾಗೂ ಚುನಾವಣೆ ಸಂಬಂಧಿತ ದೂರುಗಳನ್ನು ಸ್ವೀಕರಿಸಿ, ಪರಿಹರಿಸಲು ಹೊಳಲ್ಕೆರೆ ತಹಸಿಲ್ದಾರರ ಕಚೇರಿಯಲ್ಲಿ ಸಹಾಯವಾಣಿ 08191–200013 ಪ್ರಾರಂಭಿಸಲಾಗಿದೆ ಎಂದು ಹೊಳಲ್ಕೆರೆ ತಹಸಿಲ್ದಾರರು ತಿಳಿಸಿದ್ದಾರೆ. ಹೊಳಲ್ಕೆರೆ ತಾಲ್ಲೂಕು ಬರ ಪೀಡಿತ ತಾಲ್ಲೂಕು ಎಂದು ಈಗಾಗಲೆ ಘೋಷಣೆಯಾಗಿರುತ್ತದೆ. ಅದೇ ರೀತಿ ಲೋಕಸಭೆ ಚುನಾವಣೆಗೆ ಸಂಬಂಧಿಸಿದಂತೆಯೂ ಘೋಷಣೆಯಾಗಿದ್ದು, ಕುಡಿಯುವ ನೀರು ಸಮಸ್ಯೆ ಅಥವಾ ಲೋಕಸಭೆ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ದೂರುಗಳಿದ್ದಲ್ಲಿ ಸಹಾಯವಾಣಿ 08191–200013 ಕ್ಕೆ ಕರೆ ಮಾಡಿ ಸಲ್ಲಿಸಬಹುದಾಗಿದೆ. ಸಹಾಯವಾಣಿಯು 24 * 7 ಕಾರ್ಯ ನಿರ್ವಹಿಸಲಿದ್ದು, ಇದಕ್ಕಾಗಿ ಸರದಿ ಆಧಾರದಲ್ಲಿ ಸಹಾಯವಾಣಿ ಕೇಂದ್ರದಲ್ಲಿ ಕಾರ್ಯ ನಿರ್ವಹಿಸಲು ಸಿಬ್ಬಂದಿಗಳನ್ನು ನೇಮಿಸಲಾಗಿದೆ ಎಂದು ಹೊಳಲ್ಕೆರೆ ತಹಸಿಲ್ದಾರರು ತಿಳಿಸಿದ್ದಾರೆ.

### ವಿವಿಧೆಡೆ ಅಗ್ನಿ ಆಕಸ್ಮಿಕ: ಮನೆ ಹಾಗೂ ಬಣವೆ ಸುಟ್ಟು 70 ಸಾವಿರ ನಷ್ಟ.



» ಚಳ್ಳಕೆರೆ

ತಾಲ್ಲೂಕಿನ ಗೊರ್ಲಕಟ್ಟೆ ಗ್ರಾಮದಲ್ಲಿ ಪರಶುರಾಮಪ್ಪರವರಿಗೆ ಸೇರಿದ ಮೆಕ್ಕೆಜೋಳದ ಸಪ್ಪೆ ಬಣವೆಗೆ ಭಾನುವಾರ ಬೆಳಗ್ಗೆ ಆಕಸ್ಮಿಕವಾಗಿ ಬೆಂಕಿ ಬಿದ್ದು, ಸಂಪೂರ್ಣ ಸುಟ್ಟುಹೋಗಿದೆ. ಜಾನುವಾರುಗಳ ಮೇವಿಗಾಗಿ ದಾಸ್ತಾನು ಮಾಡಿದ್ದ ಸಪ್ಪೆ ಸುಟ್ಟಿದ್ದು, ಜಾನುವಾರುಗಳ ಸಾಕಾಣಿಕೆಗೆ ತೊಂದರೆಯಾಗಿದೆ ಎಂದು ಪರಶುರಾಮಪ್ಪ ನೊಂದು ನುಡಿದಿದ್ದಾರೆ. ಸ್ಥಳಕ್ಕೆ ಗ್ರಾಮ ಲೆಕ್ಕಾಧಿಕಾರಿ ಭೇಟಿ ನೀಡಿ ಸುಮಾರು 20 ಸಾವಿರ ನಷ್ಟ ಸಂಭವಿಸಿದೆ ಎನ್ನಲಾಗಿದೆ. ನಾಯಕನಹಟ್ಟಿ ಹೋಬಳಿಯ ಜಾಗನೂರಹಟ್ಟಿ(ಕನ್ನಯ್ಯನಹಟ್ಟಿ)ಯ ಕೆ.ಪಿ.ತಿಪ್ಪೇಸ್ವಾಮಿ ಎಂಬುವವರ ಮನೆಗೆ ಆಕಸ್ಮಿಕ ಬೆಂಕಿಹೊತ್ತಿಕೊಂಡು ಮನೆಯಲ್ಲಿದ್ದ ಬಟ್ಟೆ, ಧವಸಧಾನ್ಯ, ದಾಖಲಾತಿಗಳು ಸಂಪೂರ್ಣಸುಟ್ಟು ಸುಮಾರು 50 ಸಾವಿರಕ್ಕೂ ಹೆಚ್ಚು ನಷ್ಟ ಸಂಭವಿಸಿದೆ. ಕಂದಾಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

**ಲೋಕಸಭಾ ಚುನಾವಣೆ: ನೀತಿಸಂಹಿತೆ ಜಾರಿ**

## ಗಡಿ ಭಾಗಗಳ ಚೆಕ್ ಪೋಸ್ಟ್‌ನಲ್ಲಿ ಕಟ್ಟೆಚ್ಚರ

» ಪರಶುರಾಂಪುರ

ಲೋಕಸಭಾ ಚುನಾವಣೆಯ ಹಿನ್ನಲೆಯಲ್ಲಿ ಚುನಾವಣಾ ಅಕ್ರಮಗಳನ್ನ ತಡೆಯಲು ಪೊಲೀಸ್ ಇಲಾಕೆಯು ಗಡಿಭಾಗಗಳಲ್ಲಿ ಚೆಕ್ ಪೋಸ್ಟ್ ತೆರಯಲಾಗಿದೆ.

ಇಲಾಕೆಗಳ ಆದೇಶ ಹಾಗೂ ಅಧಿಕಾರಿಗಳ ಆದೇಶ ಮತ್ತು ಮಾರ್ಗದರ್ಶನದಲ್ಲಿ ಸ್ಥಳೀಯ ಪೊಲೀಸ್ ಠಾಣೆಯ ಪಿಎಸ್‌ಐ ಪ್ರಶಾಂತ್ ಕುಮಾರ್ ಅವರು ಪಿಆರ್ ಪುರ ವ್ಯಾಪ್ತಿಯ ಮಹದೇವಪುರ ಗೇಟ್ ಹಾಗೂ ಜಾಜೂರು ಬಳಿ ಚೆಕ್ ಪೋಸ್ಟ್‌ನ್ನ ತೆರೆಯಲಾಗಿದೆ

ಚುನಾವಣೆಗಾಗಿ ಸಕಲ ಸಿದ್ದತೆಗಳ ನಡುವೆ ಗಡಿ ಭಾಗಗಳಲ್ಲಿ ಒಳ ಬರುವ ಹಾಗೂ ವಾಹನಗಳ ಮೇಲೆ ನಿಗಾವಹಿಸಲಾಗಿದೆ.ಪ್ರತಿ ಚೆಕ್‌ಪೋಸ್ಟ್‌ನಲ್ಲಿ ಪೊಲೀಸ್ ಸಿಬ್ಬಂಧಿ ಜತೆಗೆ ವಿವಿಧ ಇಲಾಕೆಗಳ ಸಿಬ್ಬಂಧಿಗಳು ,ಸಹಾಯಕರು ನೇಮಕಗೊಳ್ಳುವರು.





ರಾಜ್ಯದ ಗಡಿಯ ಮಹದೇವಪುರ ಗೇಟ್ ಚೆಕ್ ಪೋಸ್ಟ್ ಆಗಿದ್ದ ಕಾರಣ ಇಲ್ಲಿ ಬರುವ ಎಲ್ಲಾ ವಾಹನಗಳನ್ನ ಸ್ಥಳೀಯ ಪೋಲೀಸ್ ಸಿಬ್ಬಂಧಿ ವಾಹನಗಳನ್ನ ಪರಿಶೀಲನೆ ನಡೆಸುತ್ತಿದ್ದಾರೆ. ನೆರೆ ಆಂಧ್ರಾ ಪ್ರದೇಶ ಇರುವ ಕಾರಣ ಗಡಿ ಭಾಗದಲ್ಲಿ ಕಟ್ಟೆಚ್ಚರವಹಿಸಲಾಗಿದೆ.ವಿವಿಧ ಇಲಾಕೆಯ ಅಧಿಕಾರಿಗಳ ಆದೇಶಗಳ ಪಾಲನೆಯೊಂದಿಗೆ,ಲೋಕಸಭಾ ಚುನಾವಣೆಯಲ್ಲಿ ಕಾನೂನುಗಳನ್ನ ಪರಿಪಾಲಿಸುತ್ತಾ ಶಾಂತಿಯುತವಾಗಿ ಮತದಾನದಲ್ಲಿಪ್ರತಿಯೊಬ್ಬರುತೊಡುಗುವಂತೆ ತಿಳಿಸಿದರು.

## ಚಳ್ಳಕೆರೆ: ನಗರದ ಫ್ಲೆಕ್ಸ್, ಬ್ಯಾನರ್ ತೆರವು

» ಚಳ್ಳಕೆರೆ

ಲೋಕಸಭಾ ಚುನಾವಣೆ ದಿನಾಂಕ ಪ್ರಕಟವಾಗಿ ನೀತಿಸಂಹಿತೆ ಜಾರಿಯಾದ ಹಿನ್ನೆಲೆಯಲ್ಲಿ ನಗರದ ಹಲವೆಡೆ ಅಳವಡಿಸಿದ್ದ ಫ್ಲೆಕ್ಸ್, ಬ್ಯಾನರ್, ಕಟೌಟ್, ಸರ್ಕಾರದ ಸಾಧನಾ ಫಲಕಗಳನ್ನು ತೆರವು ಮಾಡಲಾಯಿತು.

ನಗರದ ಹಲವಾರುಕಡೆಯಲ್ಲಿ ಹಾಕಿದ್ದ ರಾಜಕೀಯ ವ್ಯಕ್ತಿಗಳ ಭಾವಚಿತ್ರದ ಫಲಕಗಳನ್ನು ಮುಚ್ಚಲಾಯಿತು. ನಗರಸಭೆ ಅಧಿಕಾರಿಗಳು ನೀತಿಸಂಹಿತೆ ಘೋಷಣೆಯಾಗುತ್ತಲೇ ಕಾರ್ಯಪ್ರವೃತ್ತರಾಗಿ ಸರ್ಕಾರಿ ಕಚೇರಿ, ಖಾಸಗಿ ಕೇಂದ್ರಗಳ ಮುಂದೆ ಇದ್ದ ಹೆಸರು, ಭಾವಚಿತ್ರ, ಕಟೌಟ್, ಬ್ಯಾನರ್ ತೆರವು ಮಾಡಿದರು. ಸರ್ಕಾರಿ ಕಚೇರಿ, ನೆಹರೂ ವೃತ್ತ, ವಿವಿಧ ಕಡೆಗಳ ಹಾಕಿದ್ದ ಫ್ಲೆಕ್ಸ್, ಪೋಸ್ಟರ್, ಬ್ಯಾನರ್, ಬಿತ್ತಿಪತ್ರಗಳು, ಗೋಡೆ ಬರಹಗಳಿಗೆ




ಪೇಪರ್ ಹಾಕಿ ಮುಚ್ಚಿದರು. ಕುಡಿಯುವ ನೀರಿನ ಘಟಕ, ಉದ್ಯಾನವನ ಸೇರಿದಂತೆ ಇನ್ನಿತರೆ ಸ್ಥಳಗಳಲ್ಲಿ ಜನಪ್ರತಿನಿಧಿಗಳ ಹೆಸರು, ಭಾವಚಿತ್ರಗಳು ತೆರವು ಮಾಡಿದರು. ನೀತಿ ಸಂಹಿತೆ ಉಲ್ಲಂಘನೆ ಮೇಲೆ ನಿಗಾವಹಿಸಲು ಚುನಾವಣೆ ಅಧಿಕಾರಿಗಳು ಸೂಚನೆ ನೀಡಿದ ಹಿನ್ನೆಲೆಯಲ್ಲಿ.


ಪುಟ 2


ಚುನಾವಣೆ ನಿಯೋಜನೆಗೊಂಡ ಪ್ರತಿಯೊಬ್ಬ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಅವರವರ ಕಾರ್ಯವನ್ನ ನಿಷ್ಠೆಯಿಂದ, ಪ್ರಾಮಾಣಿಕತೆಯಿಂದ ನಿರ್ವಹಿಸಬೇಕು. ಚುನಾವಣಾ ಕಾರ್ಯದಲ್ಲಿ ಯಾವುದೇ ಲೋಪವಾದರೂ ಕಾನೂನಿನ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು.

» **ಬಿ.ಆನಂದ ಚುನಾವಣಾ ಅಧಿಕಾರಿ.**

## ಫಾಸ್ಟ್ ನ್ಯೂಸ್

### ಕುಕ್ಕುಟ, ಪಶು ಆಹಾರ: ಪರವಾನಗಿ ಕಡ್ಡಾಯ

» **ಚಿತ್ರದುರ್ಗ**

ಕುಕ್ಕುಟ ಮತ್ತು ಪಶು ಆಹಾರ ತಯಾರಿಕಾ ಘಟಕಗಳು,ಮಾರಾಟಮಾಡುವಕೇಂದ್ರಗಳು,ಸಂಘ ಸಂಸ್ಥೆಗಳು ಪಶು ಸಂಗೋಪನೆ ಇಲಾಖೆಯಿಂದ ಪರವಾನಗಿ (ಲೈಸನ್ಸ್) ಪಡೆಯುವುದು ಕಡ್ಡಾಯವಾಗಿದೆ. ಪಶುಪಾಲನಾ ಮತ್ತು ವೈದ್ಯಕೀಯ ಸೇವಾ ಇಲಾಖೆಯಿಂದ ಕರ್ನಾಟಕ ಕುಕ್ಕಟ, ಜಾನುವಾರು ಆಹಾರ (ತಯಾರಿಕೆ ಮತ್ತು ಮಾರಾಟ ನಿಯಂತ್ರಣ) ಕಾಯ್ದೆ 1987 ರ ಪ್ರಕಾರ ಕುಕ್ಕುಟ (ಕೋಳಿ) ಮತ್ತು ಜಾನುವಾರು (ಪಶು) ಆಹಾರ ತಯಾರಿಕಾ ಘಟಕಗಳು, ಮಾರಾಟ ಮಾಡುವ ಅಂಗಡಿ ಮತ್ತು ಸಂಘ ಸಂಸ್ಥೆಗಳು ಪಶುಪಾಲನಾ ಹಾಗೂ ಪಶುವೈದ್ಯಕೀಯ ಇಲಾಖೆಯಿಂದ ಉತ್ತಮ ಗುಣಮಟ್ಟದ ಕುಕ್ಕುಟ ಮತ್ತು ಪಶು ಅಹಾರ ಉತ್ಪಾದಿಸಲು, ಮಾರಾಟ ಮಾಡಲು ಪರವಾನಗಿ (ಲೈಸನ್ಸ್) ಪಡೆಯುವುದು ಕಡ್ಡಾಯವಾಗಿದೆ. ಸ್ಥಳೀಯ ಸಂಸ್ಥೆಗಳಾದ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ, ಮಹಾನಗರಪಾಲಿಕೆ ಮತ್ತು ಸ್ಥಳೀಯ ಕೈಗಾರಿಕೆ ಇಲಾಖೆಯಿಂದ ಈಗಾಗಲೇ ಪರವಾನಗಿ ಪಡೆದಿದ್ದರೂ ಕೂಡ, ಸರ್ಕಾರದ ಮೇಲ್ಕಾಣಿಸಿದ ಕಾಯ್ದೆಯನ್ವಯ ಪಶುಪಾಲನಾ ಇಲಾಖೆ ವತಿಯಿಂದ ಪರವಾನಗಿ ಪಡೆಯುವುದು ಕಡ್ಡಾಯವಾಗಿದೆ. 2024ನೇ ಸಾಲಿಗೆ ಕುಕ್ಕಟ ಮತ್ತು ಪಶು ಆಹಾರ ಉತ್ಪಾದಕರು, ಮಾರಾಟಗಾರರು ನೂತನವಾಗಿ ಪರವಾನಗಿ ಪಡೆಯಲು ಮತ್ತು ನವೀಕರಿಸಲು ಸೇವಾಸಿಂಧು ಜಾಲತಾಣ ತಂತ್ರಾಂಶ ,ಜತಿಭುಟಿಜುಣಜಡಿತುಥಿಇ. ಇಚಿಡಿಟಿಚಿಣಚಿಞಚಿ.ರಠತ.ಟಿ ಮೂಲಕ ಆನ್‍ಲೈನ್‍ನಲ್ಲಿ ಸೂಕ್ತ ದಾಖಲಾತಿಗಳನ್ನು ಅಪ್‍ಲೋಡ್ ಮಾಡಿ ಪರವಾನಗಿ ಪಡೆಯಲು ಕೋರಲಾಗಿದೆ. ಪರವಾನಗಿ ಪಡೆಯದೇ ಕುಕ್ಕಟ ಮತ್ತು ಪಶು ಆಹಾರ ಉತ್ಪಾದನೆ ಮತ್ತು ಮಾರಾಟ ಮಾಡಿದ್ದಲ್ಲಿ (ಉತ್ಪಾದನೆ ಮತ್ತು ನಿಯಂತ್ರಣ) ಆಜ್ಞೆ 1987 ರ ಕಂಡಿಕೆ 8, 9(1) ಹಾಗೂ 11(1)(ಸಿ) ಪ್ರಕಾರ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.ಹೆಚ್ಚಿನ ಮಾಹಿತಿಗಾಗಿ ಸಮೀಪದ ಪಶುಸಂಗೋಪನೆ ಇಲಾಖೆಯ ಸಂಸ್ಥೆಗಳನ್ನು ಸಂಪರ್ಕಿಸಬಹುದು ಎಂದು ಪರವಾನಗಿ ಪ್ರಾಧಿಕಾರಿ ಹಾಗೂ ಚಿತ್ರದುರ್ಗ ಪಶು ವೈದ್ಯಕೀಯ ಪಾಲಿಕ್ಲಿನಿಕ್ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಚಳ್ಳಕೆರೆ: ನಗರದ ಫ್ಲೆಕ್ಸ್, ಬ್ಯಾನರ್ ತೆರವು

» **ಮೊದಲ ಪುಟದಿಂದ**

ನಗರದ ವಿವಿಧ ಕಡೆಯ ಸರ್ಕಾರಿ ಕಛೇರಿ, ಸರ್ಕಾರಿ ಆಸ್ತಿಗಳು ಸೇರಿದಂತೆ ಇನ್ನಿತರೆ ಸಾರ್ವಜನಿಕ ಸ್ಥಳಗಳಲ್ಲಿ ಜನಪ್ರತಿನಿಧಿಗಳ ಹೆಸರು, ಭಾವಚಿತ್ರ ಹಾಗೂ ಜಾಹೀರಾತುಗಳನ್ನ ತೆರವುಗೊಳಿಸುವ ಕಾರ್ಯ ಭರದಿಂದ ಸಾಗಿತು. ನಗರದ ಪ್ರಮುಖ ನಾಲ್ಕು ರಸ್ತೆಗಳಲ್ಲಿ ಚೆಕ್ ಪೋಸ್ಟ್ ನಿರ್ಮಾಸಲಾಗಿದ್ದು, ಇಂದಿನಿಂದಲೇ ವಾಹನಗಳ ತಪಾಸಣೆ ಕಾರ್ಯ ನಡೆಯಲಿದೆ. ನಗರಕ್ಕೆ ಬರುವ ಪ್ರತಿಯೊಂದು ವಾಹನಗಳನ್ನು ತೀರ್ವ ತಪಾಸಣೆಗೆ ಒಳಪಡಿಸಿ ಯಾವುದೇ ಅಕ್ರಮ ನಡೆಯದಂತೆ ಎಚ್ಚರಿಕೆ ವಹಿಸಲಾಗಿದೆ. ಪ್ರತಿಯೊಂದು ವಾಹನವನ್ನ ತಪಾಸಣೆ ನಡೆಸಿ ಅಕ್ರಮ ಕಂಡುಬಂದರೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

### ರೈತರಿಂದ ರಾಗಿ ಖರೀದಿ

» **ಚಿತ್ರದುರ್ಗ**

ಪ್ರಸಕ್ತ ಸಾಲಿನ ಕನಿಷ್ಟ ಬೆಂಬಲ ಬೆಲೆ ಚಿತ್ರದುರ್ಗ ಜಿಲ್ಲಾ ಟಾಸ್ಕ್‌ಪೋರ್ಸ್ ಸಮಿತಿ ಸಭಾ ನಡವಳಿಯಂತೆ ಪ್ರತಿ ರೈತರಿಂದ ರಾಗಿ ಉತ್ಪಾದನೆ ಅನುಗುಣವಾಗಿ ಪ್ರತಿ ಎಕರೆಗೆ 10 ಕ್ವಿಂಟಾಲ್‍ನಂತೆ ಪ್ರತಿ ಕ್ವಿಂಟಾಲ್‍ಗೆ ರೂ.3846/– ರಂತೆ ಎಲ್ಲಾ ರೈತರಿಂದ ರಾಗಿ ಖರೀದಿಸಲಾಗುತ್ತದೆ. ಹೊಸದುರ್ಗ ತಾಲ್ಲೂಕು ಎಪಿಎಂಸಿ ಪ್ರಾಂಗಣ1, ಹೊಳಲ್ಕೆರೆ ತಾಲ್ಲೂಕು ಚಿಕ್ಕಜಾಜೂರು ಎಪಿಎಂಸಿ ಪ್ರಾಂಗಣ ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 2 ರಾಗಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ರೈತರು ರಾಗಿ ನೊಂದಣಿ ಮಾಡಿಸಲು ಕೃಷಿ ಇಲಾಖೆಯಿಂದ ನೀಡಿರುವ "ರೈತರ ನೋಂದಣಿ ಮತ್ತು ಏಕೀಕೃತ ಫಲಾನುಭವಿ ವ್ಯವಸ್ಥೆ" ಫ್ರೂಟ್ಸ್ ಐಡಿಯೊಂದಿಗೆ ಖರೀದಿ ಕೇಂದ್ರಕ್ಕೆ ಭೇಟಿ ನೀಡಿ ನೊಂದಣಿ ಮಾಡಿಸಿಕೊಳ್ಳಬೇಕು ಎಂದು ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಜಾಗನೂರಹಟ್ಟಿ(ಕನ್ನಯ್ಯನಹಟ್ಟಿ) ಯಲ್ಲಿ ಆಕಸ್ಮಿಕ ಬೆಂಕಿಯಿಂದ ಮನೆ ಸಂಪೂರ್ಣ ಸುಟ್ಟಿರುವುದು.**

# ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಕಡ್ಡಾಯ: ಡಿಸಿ

» **ಚಿತ್ರದುರ್ಗ**

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮದಂತೆ ಜಿಲ್ಲೆಯಾದ್ಯಂತ ಕನ್ನಡ ಭಾಷೆಯ ವ್ಯಾಪಕ ಬಳಕೆ ಹಾಗೂ ಶೇ.60ರಷ್ಟು ಕನ್ನಡ ಭಾಷೆಯನ್ನು ನಾಮಫಲಕಗಳ ಮೇಲ್ಭಾಗದಲ್ಲಿ ಪ್ರದರ್ಶಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–2022ನ್ನು ಸಮರ್ಪಕವಾಗಿ ಜಾರಿಗೊಳಿಸುವ ಸಂಬಂಧ ಹಾಗೂ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ–2024 ರನ್ವಯ ನಾಮಫಲಕದ ಮೇಲ್ಭಾಗದಲ್ಲಿ ಕನ್ನಡ ಭಾಷೆಯನ್ನು ಶೇ.60ರಷ್ಟು ಪ್ರದರ್ಶಿಸುವ ಕುರಿತಂತೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ನಡೆದ ಜಿಲ್ಲಾಮಟ್ಟದ ಜಾಗೃತಿ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಕನ್ನಡ ಭಾಷಾ ಸಮ್ರ ಅಭಿವೃದ್ಧಿ ವಿಧೇಯಕ ಜಾರಿಗೆ ಬಂದಿದ್ದು, ಜಿಲ್ಲೆಯಾದ್ಯಂತ ಕನ್ನಡ ಭಾಷೆಯನ್ನು ಶೇ.60ಕ್ಕಿಂತ ಹೆಚ್ಚಾಗಿ ವ್ಯಾಪಕವಾಗಿ ಬಳಕೆ ಮಾಡಬೇಕು. ಜಿಲ್ಲೆಯ ಎಲ್ಲಾ ಸರ್ಕಾರಿ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳು ಸೇರಿದಂತೆ ಕನ್ನಡವನ್ನು ಅನುಷ್ಠಾನಗೊಳಿಸಲು ಯುದ್ಧೋಪಾದಿಯಲ್ಲಿ ಕೆಲಸ ನಿರ್ವಹಿಸುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.ರಾಜ್ಯ ಸರ್ಕಾರದ ಇಲಾಖೆಗಳು, ಉದ್ಯಮಗಳು ಅಥವಾ ಸ್ವಾಯತ್ತ ಸಂಸ್ಥೆಗಳು, ಸಹಕಾರ ಮತ್ತು ಸಾರ್ವಜನಿಕ ಉದ್ಯಮಗಳು, ಶೈಕ್ಷಣಿಕ ಸಂಸ್ಥೆಗಳು,ಬ್ಯಾಂಕುಗಳು,ಇತರ ಹಣಕಾಸು ಸಂಸ್ಥೆಗಳು, ಖಾಸಗಿ ಕೈಗಾರಿಕೆಗಳು ಮತ್ತು ವಿಶ್ವವಿದ್ಯಾಲಯಗಳ ಫಲಕಗಳಲ್ಲಿರುವ ಹೆಸರುಗಳು, ಮತ್ತು ಈ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸವ ಅಧಿಕಾರಿಗಳ ಹೆಸರು ಮತ್ತು ಪದನಾಮಗಳನ್ನು ಸೂಚಿಸುವ ಫಲಕಗಳು ಪ್ರಮುಖವಾಗಿ ಶೇ.60ರಷ್ಟು ಕನ್ನಡದಲ್ಲಿ ಇರಬೇಕು.

ರಸ್ತೆಗಳು ಮತ್ತು ಬಡಾವಣೆ ಪ್ರದೇಶಗಳ ಹೆಸರುಗಳೂ ಸೇರಿದಂತೆ ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳ ಮತ್ತು ಸ್ಥಳೀಯ ಪ್ರಾಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಹಾಕಲಾಗಿರುವ ಫಲಕಗಳು ಮೇಲೆ ಪ್ರದರ್ಶಿಸಲಾಗುವ ವಿವರಗಳು ಪ್ರಮುಖವಾಗಿ ಕನ್ನಡದಲ್ಲಿ ಇರಬೇಕು.



ಕರ್ನಾಟಕದಲ್ಲಿ ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಪ್ರಕಟಣೆಗಾಗಿ ಹೊರಡಿಸಿದ ಎಲ್ಲಾಟೆಂಡರ್‌ಅಧಿಸೂಚನೆ,ಜಾಹೀರಾತು, ಅರ್ಜಿ ನಮೂನೆ, ಡಿಜಿಟಲ್ ನಮೂನೆ, ಪ್ರಮಾಣ ಪತ್ರ ಮತ್ತು ಅಧಿಸೂಚನೆಗಳು ಕನ್ನಡದಲ್ಲಿ ಇರಬೇಕು.

ಕಾರ್ಯಕ್ರಮಗಳ ಕುರಿತ ಕರಪತ್ರ, ಬ್ಯಾನರು, ಫ್ಲೆಕ್ಸು, ಎಲೆಕ್ಟ್ರಾನಿಕ್ ಪ್ರದರ್ಶನ ಫಲಕ, ಮಾಹಿತಿಗಳು, ನೋಟೀಸುಗಳು ಕನ್ನಡದಲ್ಲಿ ತರತಕ್ಕದ್ದು. ಸರ್ಕಾರವು ಕೈಗೊಂಡಂತಹ, ಸರ್ಕಾರ ಅಥವಾ ಸಂಬಂಧಿತ ಸಂಸ್ಥೆಗಳು ಅಥವಾ ಸ್ಥಳೀಯ ಪ್ರಾಧಿಕಾರಗಳಿಂದ ಯಾವುದೇ ರೀತಿಯ ಪ್ರತಿಫಲ, ಅನುದಾನ ರಿಯಾಯಿತಿ ಪಡೆದು ಅನುಷ್ಠಾನಗೊಳಿಸುತ್ತಿರುವ ಯಾವುದೇ ಯೋಜನೆಗೆ ಸಂಬಂಧಿಸಿದ ಫಲಕ, ಜಾಹೀರಾತು, ರಸೀದಿ, ಬಿಲ್ಲು, ನೋಟಿಸುಗಳು ಕನ್ನಡದಲ್ಲಿ ಇರಬೇಕು ಎಂದು ಹೇಳಿದರು.

ಸರ್ಕಾರದ ಅಥವಾ ಸ್ಥಳೀಯ ಪ್ರಾಧಿಕಾರಗಳಿಂದ ಅನುಮತಿ ಮತ್ತು ಮಂಜೂರಾತಿಯೊಂದಿಗೆ ಕಾರ್ಯನಿರ್ವಹಿಸುತ್ತಿರುವ ವಾಣಿಜ್ಯ, ಕೈಗಾರಿಕೆ ಮತ್ತು ವ್ಯವಹಾರ ಉದ್ಯಮಗಳು, ಟ್ರಸ್ಟ್‍ಗಳು, ಸಮಾಲೋಚನಾ ಕೇಂದ್ರಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು, ಮನೋರಂಜನಾ ಕೇಂದ್ರಗಳು ಮತ್ತು ಹೋಟೆಲ್‍ಗಳು ಮುಂತಾದವುಗಳು ತಮ್ಮ ನಾಮಫಲಕಗಳಲ್ಲಿ ಕನ್ನಡ ಭಾಷೆಯನ್ನು 60% ರಷ್ಟು ಪ್ರದರ್ಶಿಸಲಾಗಿದೆ ಮತ್ತು ಕನ್ನಡ ಭಾಷೆಯು ನಾಮಫಲಕದ ಮೇಲ್ಭಾಗದಲ್ಲಿ ಪ್ರದರ್ಶಿತವಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಸಾಧ್ಯವಾದಷ್ಟು ಮಟ್ಟಿಗೆ ರಾಜ್ಯದೊಳಗೆ ತಯಾರಿಸಿದ ಮತ್ತು ಮಾರಾಟವಾಗುವ ಎಲ್ಲಾ ಕೈಗಾರಿಕಾ ಮತ್ತು ಇತರ ಗ್ರಾಹಕ ಉತ್ಪನ್ನಗಳ ಹೆಸರು ಮತ್ತು ಅವುಗಳ ಬಳಕೆಯ ಕುರಿತಾದ ನಿರ್ದೇಶನಗಳು ಯಾವುದಾದರೂ ಇದ್ದಲ್ಲಿ ಯಾವುದೇ ಇತರ ಭಾಷೆಯ ಜೊತೆಗೆ ಶೇ.60%ರಷ್ಟು ಕನ್ನಡದಲ್ಲಿ ಇರಬೇಕು. ರಾಜ್ಯದಲ್ಲಿ ಸಾರ್ವಜನಿಕರಮಾಹಿತಿಗಾಗಿಪ್ರಕಟಿಸಲಾದ ಜಾಹೀರಾತು ಮತ್ತು ಸೂಚನೆಗಳನ್ನು ಪ್ರದರ್ಶಿಸುವ ಎಲ್ಲಾ ಫಲಕಗಳಲ್ಲಿ ವಿಷಯಗಳ ನಿಗದಿತ ಶೇಕಡಾವಾರು ಪ್ರಮಾಣವು ಕನ್ನಡ ಭಾಷೆಯಲ್ಲಿರಬೇಕು. ಜಾಹೀರಾತುಗಳ ವರ್ಗೀಕರಣ ಮತ್ತು ಕನ್ನಡದಲ್ಲಿಪ್ರದರ್ಶಿಸಬೇಕಾದಜಾಹೀರಾತು ವಿಷಯಗಳ ಶೇಕಡಾವಾರು ಪ್ರಮಾಣವು ರಾಜ್ಯ ಸರ್ಕಾರದಿಂದ ನಿಗದಿಪಡಿಸಿದಂತೆ ಇರಬೇಕು ಎಂದರು. ಸಭೆಯಲ್ಲಿ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂರ್ಧರ್ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತೀಕ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ಸರಳವಾಗಿ ವಿವಿಧ ಮಹನೀಯರ ಜಯಂತಿ ಆಚರಣೆ: ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ



» **ಚಿತ್ರದುರ್ಗ**

ಸಾರ್ವತ್ರಿಕ ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾರಿಯಾಗುವ ಹಿನ್ನಲೆಯಲ್ಲಿ ಶ್ರೀ. ರೇಣುಕಾಚಾರ್ಯ, ಶ್ರೀ.ಯೋಗಿನಾರೇಯಣ ಯಂತೀಂದ್ರ (ಕೈವಾರ ತಾತಯ್ಯ) ಹಾಗೂ ಶ್ರೀ. ಅಗ್ನಿಬನ್ನಿರಾಯ ಜಯಂತಿಗಳನ್ನು ಸರಳವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದರು.ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶನಿವಾರ ಜಯಂತಿಗಳ ಆಚರಣೆ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಯಾವುದೇ ಭಾವಚಿತ್ರ ಮೆರವಣಿಗೆಗೆ ಅವಕಾಶ ಇರುವುದಿಲ್ಲ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣ ಅಥವಾ ನಗರಸಭೆ ಸಭಾಂಗಣದಲ್ಲಿ ಜಯಂತಿ ಆಚರಣೆಯನ್ನು ಏರ್ಪಡಿಸಲಾಗುವುದು. ಮಹನೀಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವಮೂಲಕಅತ್ಯಂತಸರಳವಾಗಿಜಯಂತಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದರು.ವೀರಶೈವ ಮುಖಂಡರ ಮನವಿಯಂತೆ ಮಾರ್ಚ್ 23 ರ ಬದಲಾಗಿ ಮಾರ್ಚ್ 22 ರಂದು ಶ್ರೀ. ರೇಣುಕಾಚಾರ್ಯ ಜಯಂತಿಯನ್ನು ಆಚರಿಸಲು ಸಭೆಯಲ್ಲಿ ನಿರ್ಧರಿಸಲಾಯತು. ಉಳಿದಂತೆ ಮಾರ್ಚ್ 25 ರಂದು ಶ್ರೀ.ಯೋಗಿನಾರೇಯಣ ಯತೀಂದ್ರ (ಕೈವಾರ ತಾತಯ್ಯ) ಹಾಗೂ ಮಾರ್ಚ್ 28 ಶ್ರೀ.ಅಗ್ನಿಬನ್ನಿರಾಯ ಜಯಂತಿ ಆಚರಿಸಲಾಗುವುದು.ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ. ಮಲ್ಲಿಕಾರ್ಜುನ್, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಹರೀಶ್, ಪೋಲಿಸ್ ಇಲಾಖೆಯ ಸಿಪಿಐ ಗುಡ್ಡಪ್ಪ, ತೋಟಗಾರಿಕೆ ಇಲಾಖೆಯ ಅಧಿಕಾರಿ ಸಿದ್ದೇಶ್ ಸೇರಿದಂತೆ ವಿವಿಧ ಸಮುದಾಯದ ಮುಖಂಡರು ಉಪಸ್ಥಿದ್ದರು.

# ವಿಚ್ಛೇದನಕ್ಕೆ ಬಂದ ಯುವ ದಂಪತಿಗಳಿಗೆ ಮಾರ್ಗದರ್ಶನ ನೀಡಿದ ನ್ಯಾಯಾಧೀಶೆ

**ಸಹಮತ ವ್ಯಕ್ತಪಡಿಸಿದ ದಂಪತಿಗಳು ಒಂದಾದರು**



» **ಚಳ್ಳಕೆರೆ**

ತಾಲ್ಲೂಕಿನ ಗೊರ್ಲಕಟ್ಟೆ ಗ್ರಾಮದ ತಿಪ್ಪೇರುದ್ರ ಎಂಬ ಯುವಕ ಕೊಡಗಹಳ್ಳಿಯ ಅರುಣ ಎಂಬ ಯುವತಿಯೊಂದಿಗೆ ಕಳೆದ ಮೂರು ವರ್ಷಗಳ ಹಿಂದೆ ವಿವಾಹವಾಗಿದ್ದು, ವಿವಾಹವಾಗಿ ಸ್ವಲ್ಪ ದಿನದಲ್ಲಿ ಗಂಡ, ಹೆಂಡತಿಯಲ್ಲಿ ವಿರಸವಾಗಿ ನಗರದ ಸಿವಿಲ್ ನ್ಯಾಯಾಲಯಕ್ಕೆ ವಿಚ್ಚೇನದಕ್ಕಾಗಿ ಅರ್ಜಿ ಸಲ್ಲಿಸಲಾಗಿತ್ತು.

ಶನಿವಾರ ಮಧ್ಯಾಹ್ನ ಸಿವಿಲ್ ನ್ಯಾಯಾಲಯದ ಹಿರಿಯ ನ್ಯಾಯಾಧೀಶೆ ರೇಷ್ಮ ಕಲಕಪ್ಪ ಗೋಣಿ ವಿಚಾರಣೆ ಆರಂಭಿಸಿ ನಂತರ ವಿಚ್ಚೇನದಿಂದ ಆಗುವ ಅನಾಹುತ ಮತ್ತು ವೈಮನಸ್ಸುಗಳ ಬಗ್ಗೆ ಇಬ್ಬರಿಗೂ ಜಾಗೃತಿ ಮೂಡಿಸಿ ಎಂದಿನಂತೆ ಇಬ್ಬರೂ ಪರಸ್ಪರ ಹೊಂದಾಣಿಕೆ ಮೇಲೆ ಜೀವನ ನಡೆಸುವಂತೆ ಸೂಚನೆ ನೀಡಿದರು. ಗಂಡ, ಹೆಂಡತಿ ಸುಧೀರ್ಘ ಕಾಲ ಬದುಕಿ ಜೀವನ ನಡೆಸಬೇಕೆಂದು ಎಲ್ಲರ ಇಚ್ಚೆಯಾಗಿದ್ದು, ಸಣ್ಣ, ಪುಟ್ಟ ಸಮಸ್ಯೆಗಳ ಬಗ್ಗೆ ವೈಮನಸ್ಸು ಬರದಂತೆ ಇಬ್ಬರೂ ಅನ್ಯೂನತೆಯಿಂದ ಜೀವನ ನಿರ್ವಹಣೆ ಮಾಡುವಂತೆ ತಿಳಿ ಹೇಳಿದರು.



**ಚಳ್ಳಕೆರೆ ನಗರದ ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮ ಜಾತ್ರೆಯ ಅಂತಿಮದಿನವಾದ ಶನಿವಾರ ಓಕಳಿ ಪ್ರಯುಕ್ತ ಚಳ್ಳಕೆರೆಯಮ್ಮ, ಉಡಸಲಮ್ಮ, ಶ್ರೀವೀರಭದ್ರಸ್ವಾಮಿ ದೇವರ ಸಮಾಗಮ ನೂರಾರು ಭಕ್ತರ ಸಮ್ಮುಖದಲ್ಲಿ ನಡೆಯಿತು.**

## ಶೈಕ್ಷಣಿಕ ನೈಪುಣ್ಯತೆಗೆ ಸ್ಪೋಕನ್ ಇಂಗ್ಲಿಷ್ ಅನಿವಾರ್ಯ

**ಚಳ್ಳಕೆರೆ:** ಶೈಕ್ಷಣಿಕ ಪ್ರಗತಿಗೆ ಆಂಗ್ಲಭಾಷೆ ಕಲಿಕೆ ಅವಶ್ಯಕತೆ ಹಾಗೂ ಅನಿವಾರ್ಯತೆ ಆದರೆ ಈ ಭಾಷೆಯನ್ನು ಯಶಸ್ವಿಯಾಗಿ ಪ್ರಯೋಗಿಸಲು ಗ್ರಾಮಾಟಿಕಲ್ ಸ್ಪೋಕನ್ ಇಂಗ್ಲಿಷನ್ನು ಕಲಿಯಬೇಕಿದೆ. ಕಳೆದ ಹಲವಾರು ವರ್ಷಗಳಿಂದ ಧನ್ಯಸಿರಿಫೌಂಡೇಶನ್‍ವತಿಯಿಂದ ಈ ಕಾರ್ಯ ನಡೆಯುತ್ತಿದೆ ಎಂದು ಪ್ರೊ.ವೆಂಕಟಗಿರಿ ತಿಳಿಸಿದರು. ಅವರು, ತ್ಯಾಗರಾಜ ನಗರದಲ್ಲಿರುವ ಕಚೇರಿ ಆವರಣದಲ್ಲಿ ಹೂಡಿಕೆದಾರರ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು. ಮುಖ್ಯ




ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ವಕೀಲ ಸಿದ್ದಾರ್ಥ, ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸ್ಪೋಕನ್ ಇಂಗ್ಲಿಷ್ ಕಲಿಕೆ ಹೆಚ್ಚು ಮಹತ್ವವನ್ನು ಪಡೆದಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಬೋವಿ ಸಮಾಜದ ಗೌರವಾಧ್ಯಕ್ಷ ವೆಂಕಟಪ್ಪ, ನೇತಾಜಿ ಪ್ರಸನ್ನ, ರಾಜೇಶ್ವರಿ, ಬೋರಸ್ವಾಮಿ, ಸಿರಿಗ್ ಸೋಮಶೇಖರ್, ಗಾಡಿತಿಪ್ಪೇಸ್ವಾಮಿ, ಚನ್ನವೀರಪ್ಪ, ಶೇಖರಪ್ಪ,ಯಲಗಟ್ಟೆಯೋಗೇಶ್, ಪರಸಪ್ಪ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಜಿಲ್ಲಾಧಿಕಾರಿಗಳ ಭರವಸೆ; ಮಾ.18ರ ತಾಲ್ಲೂಕು ಕಚೇರಿಗೆ ಬೀಗಜಡಿಯುವ ಕಾರ್ಯಕ್ರಮ ಮುಂದೂಡಿಕೆ: ಕೆ.ಪಿ.ಭೂತಯ್ಯ

» **ಚಳ್ಳಕೆರೆ**

ತಾಲ್ಲೂಕಿನ ಸಾವಿರಾರು ರೈತರಿಗೆ ಮುಂಗಾರು ಹಂಗಾಮಿನ ಬೆಳೆವಿಮೆ ಹಣ ದೊರಕಿಲ್ಲವೆಂದು ಆರೋಪಿಸಿ ಮಾ.18ರ ಸೋಮವಾರ ತಾಲ್ಲೂಕು ಕಚೇರಿಗೆ ಬೀಗಹಾಕುವ ಕಾರ್ಯಕ್ರಮವನ್ನು ರೈತ ಸಂಘ ಹಮ್ಮಿಕೊಂಡಿರುವ ಬಗ್ಗೆ ಪತ್ರಿಕಾ ಹೇಳಿಕೆ ನೀಡಲಾಗಿತ್ತು. ಇದನ್ನು ಗಮನಿಸಿದ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಬೆಳೆವಿಮೆ ಕಂಪನಿಗೆ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಬೆಳೆವಿಮೆ ಪರಿಹಾರವನ್ನು ಮಾಚ್‌22ರೊಳಗಾಗಿ ಪಾವತಿ ಮಾಡುವ ಭರವಸೆ ನೀಡಿದ ಹಿನ್ನೆಲೆಯಲ್ಲಿ 18ರ ಸೋಮವಾರದ ಮುಷ್ಕರವನ್ನು ವಾಪಾಸ್ ಪಡೆಯಲಾಗಿದೆ ಎಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ತಿಳಿಸಿದ್ದಾರೆ. ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾಧಿಕಾರಿಗಳೇ ಈ ಬಗ್ಗೆ ಸಂಬಂಧಪಟ್ಟಕೃಷಿ ಇಲಾಖೆಅಧಿಕಾರಿಗಳಿಗೆ ಸೂಚನೆ ನೀಡಿದ್ದು, ಅಧಿಕಾರಿಗಳು ಇನ್ನು ಹತ್ತುದಿನಗಳ ಒಳಗೆ ಬೆಳೆವಿಮೆ ಪರಿಹಾರ ದೊರಕಿಸುವ ಹಿನ್ನೆಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಹಿಂದಕ್ಕೆ ಪಡೆಯಲಾಗಿದೆ ಎಂದು ತಿಳಿಸಿದರು. ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ ಮಾತನಾಡಿ, ರಾಜ್ಯ ಸರ್ಕಾರ ಬೆಳೆವಿಮೆ ಪರಿಹಾರ ನೀಡುವ ನಿಟ್ಟಿನಲ್ಲಿ ಯಾವುದೇ ಸೂಕ್ತ ಮಾಹಿತಿ ನೀಡದೆ ನಿರ್ಲಕ್ಷ್ಯ ವಹಿಸುತ್ತಿದೆ. ತಾಲ್ಲೂಕು ಕಚೇರಿಗೆ ಬೀಗಜಡಿಯುವ ಬಗ್ಗೆ ಪತ್ರಿಕಾ ಹೇಳಿಕೆ ನೀಡಲಾಗುತ್ತು. ರೈತ ಸಂಘ ಮುಷ್ಕರಕ್ಕೆ ಎಲ್ಲಾ ರೀತಿ ಸಿದ್ದತೆಗಳನ್ನು ಮಾಡಿಕೊಳ್ಳುತ್ತಿದ್ದ ಸಂದರ್ಭದಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ಸಮಯ ಕೇಳಿದ ಹಿನ್ನೆಲೆಯಲ್ಲಿ ಮುಷ್ಕರವನ್ನು ವಾಪಾಸ್ ಪಡೆಯಲಾಗಿದೆ ಎಂದರು. ಈ ಸಂದರ್ಭದಲ್ಲಿ ತಾಲ್ಲೂಕು ಅಧ್ಯಕ್ಷ ಶ್ರೀಕಂಠಮೂರ್ತಿ, ಜಿ.ಎಚ್.ಹನುಮಂತಪ್ಪ, ಗುರುಮೂರ್ತಿ, ಕರೀಕೆರೆತಿಪ್ಪೇಸ್ವಾಮಿ, ಚಂದ್ರಣ್ಣ, ಟಿ.ಹಂಪಣ್ಣ, ಜಯಣ್ಣ ಮುಂತಾದವರು ಉಪಸ್ಥಿತರಿದ್ದರು.



**ಚಳ್ಳಕೆರೆ ನಗರದ ಪ್ರವಾಸಿಮಂದಿರದಲ್ಲಿ ರೈತ ಸಂಘದಿಂದ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಮಾತನಾಡಿದರು.**

## ಫಾಸ್ಟ್ ನ್ಯೂಸ್

### ಅದ್ದೂರಿಯಾಗಿ ನಡೆದ ಪಾತಲಿಂಗೇಶ್ವರಸ್ವಾಮಿ ಜಾತ್ರಾ ಮಹೋತ್ಸವ





» **ಚಳ್ಳಕೆರೆ**

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಚನ್ನಮ್ಮನಾಗತಿಹಳ್ಳಿ ಗ್ರಾಮದಲ್ಲಿ ಎರಡು ದಿನಗಳ ಕಾಲ ನಡೆದ ಶ್ರೀಪಾತಲಿಂಗೇಶ್ವರಸ್ವಾಮಿ ಜಾತ್ರೆ ಭಾನುವಾರ ನೂರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆಯಿತು. ಪುರಾತನ ದೇವಾಲಯಗಳಲ್ಲಿ ಒಂದಾದ ಶ್ರೀಪಾತಲಿಂಗೇಶ್ವರ ಜಾತ್ರೆಗೆ ಕರ್ನಾಟಕವೂ ಸೇರಿದಂತೆ ಅಂಧ್ರಪ್ರದೇಶದಿಂದಲ್ಲೂ ನೂರಾರು ಭಕ್ತರು ಆಗಮಿಸಿ ಸ್ವಾಮಿಯ ದರ್ಶನ ಪಡೆದರು. ಗೊರವಿನಕೆರೆ ವಂಶದ ಪ್ರತಿಯೊಬ್ಬರು ಮನೆಗೆ ಇಂತಿಷ್ಟುರಂತೆ ಅಕ್ಕಿ, ಬೆಲ್ಲ, ಬೇಳೆಯನ್ನು ಒಂದೆಡೆ ಸೇರಿಸಿ ಪ್ರಸಾದ ಮಾಡಿ ನೆರೆದಿದ್ದ ನೂರಾರು ಭಕ್ತರಿಗೆ ಉಣಬಡಿಸುವ ಪದ್ಧತಿ ಇಂದಿಗೂ ನಡೆದು ಬಂದಿದೆ.ಚೋಳರ ಕಾಲದಿಂದಲ್ಲೂ ಈ ದೇವರನ್ನು ಪೂಜಿಸುವ ಮಡಿವಾಳ ಸಮಾಜದ ಗೊರವಿನಕೆರೆ ವಂಶಸ್ಥರು ಎರಡು ದಿನಗಳಕಾಲ ಶ್ರದ್ಧಾ ಭಕ್ತಿಯಿಂದ ಪೂಜಿಸಿ ತಮ್ಮ ಇಷ್ಟಾರ್ಥ ಈಡೇರಿಸುವಂತೆ ಬೇಡುತ್ತಾರೆ. ಗ್ರಾಮದಿಂದ ಸುಮಾರು ಎರಡ್ಮೂರು ಕಿ.ಮೀ ದೂರದ ಅಡವಿಯಲ್ಲಿ ನೆಲೆಸಿರುವ ಶ್ರೀಸ್ವಾಮಿಯ ದರ್ಶನಕ್ಕೆ ಉರಿಬಿಸಿಲನ್ನು ಲೆಕ್ಕಿಸದೆ ಕಾಲ್ನಡಿಗೆ ಮೂಲಕವೂ ಭಕ್ತರು ಆಗಮಿಸಿ ದರ್ಶನ ಪಡೆಯುತ್ತಾರೆ. ಪ್ರತಿವರ್ಷದಂತೆ ಈ ವರ್ಷವೂ ಸಹ ಶ್ರೀಪಾತಲಿಂಗೇಶ್ವರ ಸ್ವಾಮಿ ಜಾತ್ರೆಯ ಪ್ರಾರಂಭದಿನ ಚನ್ನಮ್ಮನಾಗತಿಹಳ್ಳಿ ಗ್ರಾಮದಿಂದ ದೇಸ್ಥಾನದವರೆಗೂ ವಿವಿಧ ಕಲಾತಂಡಗಳೊಂದಿಗೆ ಸ್ವಾಮಿಯನ್ನು ಮೆರವಣಿಗೆ ನಡೆಸಲಾಯಿತು. ಭಾನುವಾರ ಬೆಳಗ್ಗೆಯಿಂದಲೇ ರುದ್ರಾಭಿಷೇಕ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ಕಾರ್ಯಕ್ರಮಗಳು ಜರುಗಿದವು. ಗೊರವಿಕೆರೆ ವಂಶಸ್ಥರು ಮತ್ತು ನೂರಾರು ಭಕ್ತರು ಸ್ವಾಮಿಗೆ ನಮಿಸಿ ಇಷ್ಟಾರ್ಥ ಈಡೇರಿಸುವಂತೆ ನಮಿಸಿದರು. ಪರಶುರಾಮಪುರ ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕಿರ[illegible]ಶಂಕರ್, ದೇವಸ್ಥಾನ ಸಮಿತಿ ಅಧ್ಯಕ್ಷ ಆರ್. ಮಲ್ಲಣ್ಣ, ಉಪಾಧ್ಯಕ್ಷ ತಿಪ್ಪೇಸ್ವಾಮಿ, ಖಜಾಂಚಿ ವೇದಮೂರ್ತಿ,ಕಾರ್ಯದರ್ಶಿ ಕರೀಕೆರೆನಾಗರಾಜು, ಚಂದ್ರಣ್ಣ, ಪಾತಲಿಂಗಪ್ಪ, ಎನ್.ಪ್ರಕಾಶ್, ನಿಂಗಣ್ಣ, ವಿಶ್ವನಾಥ, ನರೇಂದ್ರಕುಮಾರ್, ಮಂಜುನಾಥ, ಪೂಜಾರ್ ಶ್ರೀನಿವಾಸ್, ಹನುಂಮತಪ್ಪ ಮತ್ತು ಗೊರವಿನಕೆರೆ ವಂಶಸ್ಥರು ಪಾಲ್ಗೊಂಡಿದ್ದರು.

### ಲೋಕ ಅದಾಲತ್‌ನಲ್ಲಿ ರಾಜೀಯಾದ ಪ್ರಕರಣಗಳ ವಿವರ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಆದಾಲತ್‌ನ್ನು ಹಮ್ಮಿಕೊಳ್ಳಲಾಗಿತ್ತು. ರಾಜಿ, ಸಂಧಾನದ ಮೂಲಕ ಜಿಲ್ಲೆಯಲ್ಲಿ 4568 ಜಾರಿಯಲ್ಲಿರುವ ಪ್ರಕರಣಗಳಲ್ಲಿ ರೂ. 12,56,89,479 ಹಣದ ಪರಿಹಾರ ಒದಗಿಸಲಾಗಿದೆ. ಮತ್ತು 1,44,773 ವ್ಯಾಜ್ಯಪೂರ್ವ ಪ್ರಕರಣಗಳಲ್ಲಿ 47,33,07,260 ಹಣದ ಪರಿಹಾರವಾಗಿ ರಾಜೀ ಮೂಲಕ ಕೊಡಿಸಿ ಪ್ರಕರಣಗಳನ್ನು ಮುಕ್ತಾಯಗೊಳಿಸಲಾಗಿದೆ. ವಿವಿಧ ಪ್ರಕರಣಗಳ ವಿವರ: 81 ಅಪರಾಧಿಕ ಪ್ರಕರಣಗಳು, 143 ಚೆಕ್ ಅಮಾನ್ಯ ಪ್ರಕರಣಗಳು, 19 ಬ್ಯಾಂಕ್ ವಸೂಲಾತಿ ಪ್ರಕರಣಗಳು, 14 ಇತರೆ ಹಣ ವಸೂಲಾತಿ ಪ್ರಕರಣಗಳು, 53 ಅಪಘಾತ ಪ್ರಕರಣಗಳು, 19 ಪಾಲು ವಿಭಾಗ ಪ್ರಕರಣಗಳು, 200 ಜಾರಿ ಅರ್ಜಿಗಳು ಅಲ್ಲದ ಹಲವು ಕಾರಣಕ್ಕಾಗಿ ದಾಖಲಿಸಿದ 55 ದಾವೆಗಳು ಮತ್ತು ಜೀವನಾಂಶ ಕೋರಿ ದಾಖಲಿಸಿದ್ದ ದಾವೆಗಳು ರಾಜೀ ಮೂಲಕ ಇತ್ಯರ್ಥಗೊಂಡಿರುತ್ತದೆ. ಇದಲ್ಲದೇ ಇತರೆ ಪ್ರಕರಣಗಳು ಸೇರಿ ಒಟ್ಟು 1568 ಜಾರಿಯಲ್ಲಿದ್ದ ಪ್ರಕರಣಗಳು ಇತ್ಯರ್ಥಗೊಂಡಿದೆ. ಮೇಲ್ಕಾಣಿಸಿದ ಇತ್ಯರ್ಥವಾದ ಪ್ರಕರಣಗಳಲ್ಲಿ ಪ್ರಮುಖವಾಗಿ ಕೌಟುಂಬಿಕ ಕಲಹದಿಂದಾಗಿ ಬೇರೆಯಾಗಿದ್ದ 8 ಜೋಡಿ ದಂಪತಿಗಳು ಒಂದಾಗಿದ್ದು ವಿಶೇಷವಾಗಿತ್ತು. ಜಿಲ್ಲೆಯಾದ್ಯಂತ ಸುಮಾರು 513 ಕ್ಕಿಂತ ಹೆಚ್ಚು ಶಾಲಾ ವಿದ್ಯಾರ್ಥಿಗಳ ಜನನ ಪ್ರಮಾಣ ಪತ್ರಗಳ ಕುರಿತು ಕಂದಾಯ ಇಲಾಖೆ ಮತ್ತು ಮಹಾನಗರ ಪಾಲಿಕೆಯ ಅಧಿಕಾರಿಗಳು ರಾಜಿ ಮಾಡಿಕೊಳ್ಳುವ ಮೂಲಕ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಮತ್ತು ಅವರುಗಳಿಗೆ ಸರ್ಕಾರದಿಂದ ಬರಬಹುದಾದ ವಿದ್ಯಾರ್ಥಿ ವೇತನ ಹಾಗೂ ಇತರ ಅನುಕೂಲತೆಗಳಿಗೆ ಅನುವು ಮಾಡಿಕೊಟ್ಟಂತಾಯಿತು. ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಸಹಕರಿಸಿದ ನ್ಯಾಯಾವಾದಿಗಳು, ವಕೀಲರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಜಿಲ್ಲಾ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಅವರು ಅಭಿನಂದಿಸಿರುತ್ತಾರೆ.

**85 ವರ್ಷ ಮೇಲ್ಪಟ್ಟವರು, ವಿಕಲಚೇತನರಿಗೆ ಮನೆಯಲ್ಲಿಯೇ ಮತದಾನಕ್ಕೆ ಅವಕಾಶ, ಅಗತ್ಯ ಸೇವೆಯಲ್ಲಿರುವರಿಗೆ ಪೋಸ್ಟಲ್ ಬ್ಯಾಲೆಟ್ ಮೂಲಕ ಮತದಾನಕ್ಕೆ ಅವಕಾಶ**

# 100ರಷ್ಟು ನಮೂನೆ 12 ಡಿ ವಿತರಣೆಗೆ ಡಿಸಿ ಸೂಚನೆ

» **ಚಿತ್ರದುರ್ಗ**

85 ವರ್ಷ ಮೇಲ್ಪಟ್ಟವರು, ವಿಕಲಚೇತನರು ಹಾಗೂ ಅಗತ್ಯ ಸೇವೆಯಲ್ಲಿ ಕರ್ತವ್ಯ ನಿರತರಾದವರಿಗೆ ಮತದಾನದಿಂದ ವಂಚಿತರಾಗದಂತೆ ಚುನಾವಣಾ ಆಯೋಗ ಇವರಿಗೆ ಪೋಸ್ಟಲ್ ಬ್ಯಾಲೆಟ್ ಮೂಲಕ ಮತದಾನಕ್ಕೆ ಅವಕಾಶ ಕಲ್ಪಿಸಿದ್ದು, ಅರ್ಹರೆಲ್ಲರಿಗೂ ಶೇ.100ರಷ್ಟು 12 ಡಿ ಫಾರಂ ವಿತರಣೆ ಮಾಡಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾನುವಾರ ಲೋಕಸಭಾ ಚುನಾವಣೆ-2024ರ ಸಂಬಂಧ ವಿಧಾನಸಭಾ ಕ್ಷೇತ್ರವಾರು ಪೋಸ್ಟಲ್ ಬ್ಯಾಲೆಟ್ ಹಾಗೂ ಎವಿಇಎಸ್‌ಗೆ ಸಂಬಂಧಿಸಿದಂತೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

12-ಡಿ ಫಾರಂ ವಿತರಣೆ ಮಾಡಿದ ನಂತರ ಅವರು ಪೋಸ್ಟಲ್ ಬ್ಯಾಲೆಟ್ ಮೂಲಕ ಮತದಾನ ಮಾಡಲೇಬೇಕು ಎಂಬುವುದು ಕಡ್ಡಾಯವಲ್ಲ. ಇದು ಅವರಿಗೆ ನೀಡುವ ಒಂದು ಸೌಲಭ್ಯವಾಗಿದೆ. 12 ಡಿ ಫಾರಂಗೆ ಒಪ್ಪಿಗೆ ನೀಡಿ, ಪೋಸ್ಟಲ್ ಬ್ಯಾಲೆಟ್ ಮೂಲಕ ಮತದಾನ ಮಾಡುತ್ತೇನೆ. ಪೋಸ್ಟಲ್ ಬ್ಯಾಲೆಟ್ ನೀಡಿ ಎಂದು ವಾಪಾಸ್ಸು ಕೊಟ್ಟಾಗ ಮಾತ್ರ ಅದು ಪೋಸ್ಟಲ್ ಬ್ಯಾಲೆಟ್ ಮತದಾನಕ್ಕೆ ಒಪ್ಪಿಗೆ ಸೂಚಿಸಿದಂತಾಗುತ್ತದೆ ಎಂದು ಹೇಳಿದರು.

12 ಡಿ ವಿತರಣೆ ಹಾಗೂ ಸಂಗ್ರಹಕ್ಕೆ ಸಂಬಂಧಪಟ್ಟ ತಂಡದವರು 85 ವರ್ಷ ಮೇಲ್ಪಟ್ಟವರು ಹಾಗೂ ವಿಕಲಚೇತನರ ಮನೆಗೆಳಿಗೆ ಖುದ್ದಾಗಿ ನೀಡಬೇಕು. ಇದಕ್ಕೆ ಸಂಬಂಧಪಟ್ಟಂತೆ ಸ್ವೀಕೃತಿ ಪಡೆಯುವುದು ಕಡ್ಡಾಯವಾಗಿದೆ ಎಂದು ತಾಕೀತು ಮಾಡಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ವಿಧಾನಸಭಾ ಕ್ಷೇತ್ರವಾರು ಮಾರ್ಕಿಂಗ್ ಆಗಿರುವ 85 ವರ್ಷ ಮೇಲ್ಪಟ್ಟವರು ಹಾಗೂ ವಿಕಲಚೇತನರ ಮಾಹಿತಿ ಲಭ್ಯವಿದೆ. ಮತದಾನ ಕೇಂದ್ರಕ್ಕೆ ತೆರಳಿ ಮತ ಚಲಾಯಿಸಲು ತೊಂದರೆ ಇರುವಂತಹ ವಿಶೇಷಚೇತನರು ಹಾಗೂ 85 ವರ್ಷ ಮೇಲ್ಪಟ್ಟವರಿಗೆ ಅವರ ಮನೆ ಮನೆಗೆ ತೆರಳಿ ಮತದಾನ ಪಡೆಯಲು ವ್ಯವಸ್ಥೆ ಮಾಡಲಾಗಿದ್ದು, ಇದಕ್ಕೆ ಸಂಬಂಧಿಸಿದ ನಿಗಧಿತ ನಮೂನೆಯನ್ನು ಆಯಾ ಬೂತ್ ಮಟ್ಟದ ಅಧಿಕಾರಿಗಳ ಮೂಲಕ ತಲುಪಿಸಬೇಕು. ಇದರ ಜೊತೆಗೆ ಚುನಾವಣಾ ಸಂದರ್ಭದಲ್ಲಿ ಅಗತ್ಯ ಸೇವೆಯಲ್ಲಿ ಕರ್ತವ್ಯ ನಿರತವಾಗಿರುವ ವಿವಿಧ ಕ್ಷೇತ್ರಗಳ ಅಧಿಕಾರಿ, ಸಿಬ್ಬಂದಿಗಳು ಮತದಾನದಿಂದ ವಂಚಿತರಾಗದಂತೆ ಚುನಾವಣಾ ಆಯೋಗ ಪೋಸ್ಟಲ್ ಬ್ಯಾಲಟ್ ಮೂಲಕ ಮತದಾನ ಮಾಡಲು ಅವಕಾಶ ಕಲ್ಪಿಸಿದೆ. ಈ ಹಿನ್ನಲೆಯಲ್ಲಿ ಅಗತ್ಯ ಸೇವೆಯಲ್ಲಿರುವ 13 ಇಲಾಖೆ/ ಕ್ಷೇತ್ರಗಳನ್ನು ಆಯ್ಕೆ ಮಾಡಲಾಗಿದ್ದು, ಮತದಾನದ ದಿನದಂದು, ಕರ್ತವ್ಯ ನಿರತರಾಗುವ ಕಾರಣ, ಮತಗಟ್ಟೆಗೆ ತೆರಳಿ ಮತ ಚಲಾಯಿಸಲು ಆಗದೇ ಇರುವವರ ಇಲಾಖೆ/ಕ್ಷೇತ್ರವಾರು ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಮಾಹಿತಿಯನ್ನು ಚುನಾವಣಾ ಆಯೋಗಕ್ಕೆ ಮಾಹಿತಿ ಸಲ್ಲಿಸಿದ್ದು, ಅದರ ಆಧಾರದ ಮೇಲೆ ಅಗತ್ಯ ಸೇವೆಯಲ್ಲಿರುವವರಿಗೆ 12 ಡಿ ಫಾರಂ ವಿತರಣೆ ಮಾಡಬೇಕು. ಇದರ ಮಾಹಿತಿಯನ್ನು ಸಂಬಂಧಪಟ್ಟ ನೋಡಲ್ ಅಧಿಕಾರಿಗಳು ಎಲೆಕ್ಟ್ರೋ ಆಪ್‌ನಲ್ಲಿ ಅಪ್‌ಲೋಡ್ ಮಾಡಬೇಕು. ಎಂದು ಹೇಳಿದ ಅವರು, ಮತದಾನದ ದಿನದಂದು ಮತ ಚಲಾಯಿಸಲು ಸಾಧ್ಯವಾಗದ ಅಧಿಕಾರಿಗಳು, ಸಿಬ್ಬಂದಿಗಳಿಗೆ ಮತದಾನ ದಿನದ ಬದಲಿಗೆ ಮತದಾನಕ್ಕೂ ಪೂರ್ವದಲ್ಲಿಯೇ ಫೆಸಿಲಿಟೇಶನ್ ಸೆಂಟರ್‌ನಲ್ಲಿ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೇರಿದಂತೆ ವಿಧಾನಸಭಾ ಕ್ಷೇತ್ರವಾರು ಸಹಾಯಕ ಚುನಾವಣಾಧಿಕಾರಿಗಳು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ನಾಯಕನಹಟ್ಟಿ ಜಾತ್ರೆ: ವಸ್ತು ಪ್ರದರ್ಶನ ಕಾರ್ಯಕ್ರಮ ವ್ಯವಸ್ಥಿತವಾಗಿರಲಿ: ಎಸಿ

» **ಚಿತ್ರದುರ್ಗ**

ಚಳ್ಳಕೆರೆ ತಾಲ್ಲೂಕಿನ ನಾಯಕನಟ್ಟಿಯ ಶ್ರೀ ಗುರುತಿಪ್ಪೇರುದ್ರಸ್ವಾಮಿ ಜಾತ್ರೆಯ ಅಂಗವಾಗಿ ಪ್ರತಿ ವರ್ಷದಂತೆ ಈ ವರ್ಷವೂ ವಿವಿಧ ಇಲಾಖೆಯ ವಸ್ತು ಪ್ರದರ್ಶನ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಆಯೋಜಿಸಬೇಕು ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಹೇಳಿದರು.



ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ನಾಯಕನಹಟ್ಟಿ ಶ್ರೀ ಗುರುತಿಪ್ಪೇರುದ್ರಸ್ವಾಮಿ ಜಾತ್ರೆಯ ಅಂಗವಾಗಿ ವಸ್ತು ಪ್ರದರ್ಶನ ಕಾರ್ಯಕ್ರಮ ನೆರವೇರಿಸುವ ನೆರವೇರಿಸುವ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಾಯಕನಹಟ್ಟಿ ತಿಪ್ಪೇರುದ್ರಸ್ವಾಮಿ ವಾರ್ಷಿಕ ಜಾತ್ರೆಯು ಇದೇ ಮಾರ್ಚ್ 19 ರಿಂದ ಏಪ್ರಿಲ್ 1 ರವರೆಗೆ ನಡೆಯಲಿದ್ದು, ದೊಡ್ಡ ರಥೋತ್ಸವ ಮಾರ್ಚ್ 26ರಂದು ನಡೆಯಲಿದೆ. ಜಾತ್ರೆಯ ಅಂಗವಾಗಿ ವಿವಿಧ ಇಲಾಖೆಗಳು ವಸ್ತು ಪ್ರದರ್ಶನ ಏರ್ಪಡಿಸಬೇಕು, ಆರೋಗ್ಯ ಇಲಾಖೆಯವರು ಸ್ವಚ್ಛತೆ ಹಾಗೂ ಬೇಸಿಗೆಯಲ್ಲಿ ಕಂಡುಬರುವ ರೋಗಗಳ ಕುರಿತು ಮುಂಜಾಗ್ರತಾ ಕ್ರಮಗಳ ಕುರಿತು ಸಾರ್ವಜಕರಿಗೆ ಮಾಹಿತಿ ಶಿಕ್ಷಣ ನೀಡಬೇಕು ಎಂದರು.

ಜಿಲ್ಲಾ ಪಂಚಾಯಿತಿಯವರು ಸ್ವ ಸಹಾಯ ಗುಂಪಿನಮಹಿಳೆಯರಿಂದತಯಾರಿತಉತ್ಪನ್ನಗಳ ಮಾರಾಟ ಮಳಿಗೆಗಳನ್ನು ತೆರೆಯಬೇಕು ಎಂದು ಹೇಳಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಹಿನ್ನಲೆಯಲ್ಲಿ ನೀತಿ ಸಂಹಿತೆ ಜಾರಿಗೆ ಬರುವುದರಿಂದ ವಸ್ತು ಪ್ರದರ್ಶನದಲ್ಲಿ ಯಾವುದೇ ಜನಪ್ರತಿನಿಧಿಗಳ ಭಾವಚಿತ್ರವನ್ನು ಹಾಕಬಾರದು ಹಾಗೂ ನೀತಿ ಸಂಹಿತೆಯ ಉಲ್ಲಂಘನೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಡಾ.ಕಾಶೀ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರವೀಣ್ ಚೌಧರಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಸವಿತಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಕೈಗಾರಿಕೆ ಇಲಾಖೆ ಉಪನಿರ್ದೇಶಕ ಮಂಜುನಾಥ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ಚಳ್ಳಕೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಐದುಕರೆ ಚೆಕ್‌ಪೋಸ್ಟ್‌ಗಳ ಆರಂಭ

### ನಿರಂತರ ವಾಹನಗಳ ತಪಾಸಣೆ: ತಹಶೀಲ್ದಾರ್



» **ಚಳ್ಳಕೆರೆ**

ಲೋಕಸಭಾ ಚುನಾವಣೆ ಘೋಷಣೆ ಬೆನ್ನಲ್ಲೆ ಜಿಲ್ಲಾ ಚುನಾವಣಾಧಿಕಾರಿಗಳ ಸೂಚನೆ ಮೇರೆಗೆ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ತಪಾಸಣಾ ಕೇಂದ್ರಗಳನ್ನು ಆರಂಭಿಸಿ ವಾಹನಗಳಲ್ಲಿ ಹಣ ಹಾಗೂ ಇನ್ನಿತರೆ ವಸ್ತುಗಳನ್ನು ಸಾಗಾಟ ಮಾಡುವ ಬಗ್ಗೆ ಪರಿಶೀಲನೆ ನಡೆಸಲಾಗುತ್ತಿದೆ. ಹಣ ಹಾಗೂ ಬೆಲೆಬಾಳುವ ಯಾವುದೇ ವಸ್ತು ದೊರಕಿದರೂ ಮುಟ್ಟುಗೋಲು ಹಾಕಿಕೊಳ್ಳುವುದಾಗಿ ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದರು. ಅವರು, ಭಾನುವಾರ ಚಿತ್ರದುರ್ಗ ರಸ್ತೆಯ ತಪಾಸಣಾ ಕೇಂದ್ರಕ್ಕೆ ಭೇಟಿ ನೀಡಿ ವಾಹನಗಳ ತಪಾಸಣೆ ನಡೆಸಿದರು. ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು ಐದು ಕಡೆಗಳಲ್ಲಿ ಚೆಕ್‌ಪೋಸ್ಟ್ ನಿರ್ಮಿಸಲಾಗಿದೆ. ಚಿತ್ರದುರ್ಗರಸ್ತೆಯ ಬೆಸ್ಕಾಂ ಕಚೇರಿ, ಬಳ್ಳಾರಿಯ ನಾಯಕನಹಟ್ಟಿ ಕ್ರಾಸ್, ಬೆಂಗಳೂರು ರಸ್ತೆಯ ರೋಜಾ ಹೋಟೆಲ್, ಪಾವಗಡ ರಸ್ತೆಯ ನಾಗಪ್ಪನಹಳ್ಳಿ ಗೇಟ್ ಹಾಗೂ ಬೊಗಳೇರಹಟ್ಟಿಯಲ್ಲಿ ಚೆಕ್‌ಪೋಸ್ಟ್ ನಿರ್ಮಿಸಿ ದಿನದ 24 ಗಂಟೆಗಳ ಕಾಲವೂ ಎಲ್ಲಾ ವಾಹನಗಳ ತಪಾಸಣೆ ನಡೆಸಲಾಗುವುದು ಎಂದರು.

**ಪ್ರಮುಖ ಸುದ್ದಿ**

**ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್**

# ಸುವಿಧಾ ತಂತ್ರಾಂಶದ ಮೂಲಕ ಚುನಾವಣೆ ಪ್ರಚಾರಕ್ಕೆ ಅನುಮತಿ

» **ಚಿತ್ರದುರ್ಗ**

ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾಗಿದೆ. ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ಚುನಾವಣೆ ಪ್ರಚಾರಕ್ಕೆ ಸಂಬಂಧಿಸಿದಂತೆ ಅನುಮತಿ ಪಡೆಯುವುದು ಕಡ್ಡಾಯವಾಗಿದೆ. ಈ ಅನುಮತಿ ಪಡೆಯಲು ಸುವಿಧಾ ತಂತ್ರಾಂಶದ ಮೂಲಕವೇ ಅರ್ಜಿ ಸಲ್ಲಿಸಬೇಕು. ಅನುಮತಿಯನ್ನು ಸಹ ಸುವಿಧಾ ತಂತ್ರಾಂಶದಲ್ಲಿಯೇ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.



ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಭಾನುವಾರ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಪ್ರಚಾರ ಸಭೆ, ಪ್ರಚಾರಕ್ಕೆ ಬಳಸುವ ವಾಹನ ಸೇರಿದಂತೆ ಇತರೆ ವಿಷಯಗಳಿಗೆ ಅನುಮತಿ ಪಡೆಯಲು ಭೌತಿಕವಾಗಿ ಅರ್ಜಿ ಸಲ್ಲಿಸಲು ಯಾವುದೇ ಅವಕಾಶ ಇಲ್ಲ. ಸುವಿಧಾ ತಂತ್ರಾಂಶದ ಮೂಲಕವೇ ಅರ್ಜಿ ಸಲ್ಲಿಸಬೇಕು. ಚುನಾವಣೆ ಪ್ರಚಾರ ಸಭೆಯ ಆಯೋಜನೆಯ 48 ಗಂಟೆಗಳ ಮುನ್ನ ಅರ್ಜಿ ಸಲ್ಲಿಸಿದರೆ ಅನುಮತಿ ನೀಡಲು ಅನುಕೂಲವಾಗಲಿದೆ. ಅರ್ಜಿ ಸಲ್ಲಿಸಿದ ಜೇಷ್ಠತೆಯ ಆಧಾರದಲ್ಲಿಯೇ ಅನುಮತಿಯನ್ನು ಸಹ ನೀಡಲಾಗುವುದು. ಮೊದಲು ಅರ್ಜಿ ಸಲ್ಲಿಸಿದವರಿಗೆ ಮೊದಲು ಅನುಮತಿ ಲಭಿಸಲಿದೆ. ಯಾವುದೇ ಗೊಂದಲಕ್ಕೆ ಅವಕಾಶ ಇಲ್ಲ. ಎಲ್ಲಾ ಚುನಾವಣೆ ಕಾರ್ಯ ನಿಮಿತ್ತ, ಪೊಲೀಸ್, ಅಗ್ನಿಶಾಮಕ ಸೇರಿದಂತೆ ವಿವಿಧ ಇಲಾಖೆಗಳ ಅನುಮತಿಗಾಗಿ ಏಕಗವಾಕ್ಷಿ ವ್ಯವಸ್ಥೆ ಆರಂಭಿಸಿರುವುದಾಗಿ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ಎಲೆಕ್ಟ್ರಾನಿಕ್ ಮಾಧ್ಯಮ ಮೂಲಕ ಬಿತ್ತರಿಸುವ ಜಾಹೀರಾತು ಸಂದೇಶ ವಿಷಯದ ಬಗ್ಗೆ ಮಾಧ್ಯಮ ಪ್ರಮಾಣೀಕರ ಸಮಿತಿಯ ಅನುಮೋದನೆ ಪಡೆಯಬೇಕು. ಅನ್ಯಧರ್ಮ, ಕೋಮು, ಜಾತಿ ಹಾಗೂ ವ್ಯಕ್ತಿಗಳ ಬಗ್ಗೆ ದ್ವೇಷ ಭಾಷಣ ಮಾಡುವುದು ಮಾದರಿ ನೀತಿ ಸಂಹಿತೆಯ ಸ್ಪಷ್ಟ ಉಲಂಘನೆಯಾಗಿದೆ. ಇಂತಹ ಪ್ರಕರಣಗಳು ಕಂಡುಬಂದರೆ ಕೇಸು ದಾಖಲಿಸಲಾಗುವುದು. ಯಾವುದೇ ಕಾರಣಕ್ಕೂ ಧಾರ್ಮಿಕ ಕಾರ್ಯಗಳು, ಜಾತ್ರೆ, ಉತ್ಸವಗಳಲ್ಲಿ ಚುನಾವಣೆ ಪ್ರಚಾರ ಮಾಡಬಾರದು. ಖಾಸಗಿ ಮದುವೆ ಮುಂತಾದ ಸಭೆಗಳಲ್ಲಿ ರಾಜಕೀಯ ಮುಖಂಡರು ಹಾಗೂ ಅಭ್ಯರ್ಥಿ ಪಾಲ್ಗೊಳ್ಳಲು ಯಾವುದೇ ನಿರ್ಬಂಧವಿಲ್ಲ. ಆದರೆ ಈ ಸ್ಥಳಗಳಲ್ಲಿ ಚುನಾವಣೆ ಪ್ರಚಾರ ಮಾಡುವಂತಿಲ್ಲ. ಒಂದು ವೇಳೆ ಚುನಾವಣೆ ಪ್ರಚಾರ ನಡೆಸಿರುವುದು ಕಂಡುಬಂದರೆ ಇಡೀ ಮದುವೆ ಖರ್ಚು ವೆಚ್ಚಗಳು ಅಭ್ಯರ್ಥಿಯ ಚುನಾವಣೆ ವೆಚ್ಚಕ್ಕೆ ಸೇರಿಸಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಸಿದರು.

ರಾಜಕೀಯ ಪಕ್ಷಗಳ ಸಹಮತಿಯೊಂದಿಗೆ ಚುನಾವಣೆ ಪ್ರಚಾರಕ್ಕೆ ಸಂಬಂಧಿಸಿದಂತೆ ಬಳಸುವ ಎಲ್ಲಾ ವಸ್ತುಗಳ ದರಪಟ್ಟಿಯನ್ನು ಈಗಾಗಲೇ ಸಿದ್ಧಪಡಿಸಲಾಗಿದೆ. ಈ ಆಧಾರದಲ್ಲಿ ಚುನಾವಣೆ ಪ್ರಚಾರ ವೆಚ್ಚವನ್ನು ದಾಖಲು ಮಾಡಲಾಗುವುದು. ಅಭ್ಯರ್ಥಿಗಳು ಚುನಾವಣೆ ವೆಚ್ಚಕ್ಕೆ ಸಂಬಂಧಿಸಿದಂತೆ ರಿಜಿಸ್ಟರ್ ನಿರ್ವಹಿಸಬೇಕು. ಪಕ್ಷಗಳು ಹಾಗೂ ಅಭ್ಯರ್ಥಿಗಳು ಚುನಾವಣೆ ಅಧಿಕಾರಿಯೊಂದಿಗೆ ಸಮನ್ವಯ ಹಾಗೂ ಸಂಪರ್ಕಕ್ಕಾಗಿ ಅಧಿಕೃತ ಏಜೆಂಟರನ್ನು ನೇಮಕ ಮಾಡಬೇಕು. ಹೀಗೆ ನೇಮಿಸಿದ ಏಜೆಂಟರುಗಳಿಗೆ ಸುವಿಧಾ ತಂತ್ರಾಂಶ ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ, ಚುನಾವಣೆ ವೆಚ್ಚ ನಿರ್ವಹಣೆ ಬಗ್ಗೆ ತರಬೇತಿ ನೀಡಲಾಗುವುದು ಎಂದು ತಿಳಿಸಿದರು.

ಚುನಾವಣೆ ಪ್ರಚಾರಕ್ಕೆ ಮಕ್ಕಳನ್ನು ಬಳಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧ ಮಾಡಲಾಗಿದೆ. ಒಂದು ವೇಳೆ ಮಕ್ಕಳ ಬಳಕೆ ಕಂಡುಬಂದರೆ ಬಾಲ ನ್ಯಾಯ ಕಾಯ್ದೆ ಹಾಗೂ ಜನಪ್ರತಿನಿಧಿಗಳ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗುವುದು. ಚುನಾವಣೆ ಅಕ್ರಮ ಹಾಗೂ ಉಚಿತ ಕೊಡುಗೆಗಳನ್ನು ನೀಡುವ ಅಂಶ ಕಂಡುಬಂದರೆ ಸಿ-ವಿಜಿಲ್ ಅಥವಾ ಸಹಾಯವಾಣಿ ಸಂಖ್ಯೆ 1950 ಮೂಲಕ ದೂರು ನೀಡಬಹುದು ಎಂದು ಹೇಳಿದರು.

ಚುನಾನಣಾ ವೇಳಾ ಪಟ್ಟಿಯಂತೆ ಮಾಚ್ 28 ರಂದು ಅಧಿಸೂಚನೆ ಹೊರಡಿಸಲಾಗುವುದು. ಏಪ್ರಿಲ್ 4 ನಾಮಪತ್ರ ಸಲ್ಲಿಸಲು ಕಡೆಯ ದಿನವಾಗಿದೆ. ಕ್ರಮಬದ್ಧವಾಗಿ ನಾಮಪತ್ರ ಸಲ್ಲಿಸಲು ಅಭ್ಯರ್ಥಿಗಳ ಸಹಾಯಕ್ಕಾಗಿ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ತಂಡವನ್ನು ನೇಮಿಸಲಾಗುವುದು. ಏಪ್ರಿಲ್ 5 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಏಪ್ರಿಲ್ 8 ರಂದು ನಾಮಪತ್ರ ಹಿಂಪಡೆಯಲು ಕಡೆಯ ದಿನವಾಗಿದೆ. ನಂತರ ನಮೂನೆ 7ಎ ಅಡಿಯಲ್ಲಿ ಕಣದಲ್ಲಿ ಇರುವ ಅಂತಿಮ ಅಭ್ಯರ್ಥಿಗಳ ಪಟ್ಟಿ ಘೋಷಿಸಲಾಗುವುದು.ನಾಮಪತ್ರಸಲ್ಲಿಸುವ ಮುಂಚೆ ನಡೆಸುವ ಪ್ರಚಾರದ ವೆಚ್ಚಗಳು ರಾಜಕೀಯ ಪಕ್ಷಗಳಿಗೆ ಹೊಂದಿಸಿದರೆ, ನಾಮಪತ್ರ ಸಲ್ಲಿಸಿದ ನಂತರ ಚುನಾವಣೆ ವೆಚ್ಚಗಳನ್ನು ಅಭ್ಯರ್ಥಿಗಳೊಂದಿಗೆ ಹೊಂದಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಸ್ಪಷ್ಟ ಪಡಿಸಿದರು.

ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ಹೊಸದಾಗಿ ಕಚೇರಿ ತೆರೆಯಲು ಅನುಮತಿ ಪಡೆದುಕೊಳ್ಳಬೇಕು. ಮತಗಟ್ಟೆಗಳಿಗೆ ಪಕ್ಷದ ಏಜೆಂಟ್‌ರನ್ನು ನೇಮಕದಲ್ಲಿ ಯಾವುದೇ ಗೊಂದಲಕ್ಕೀಡು ಮಾಡದಂತೆ ಸಹಾಯಕ ಚುನಾವಣೆ ಅಧಿಕಾರಿಗಳಿಗೆ ಸೂಚನೆ ನೀಡುವುದಾಗಿ ಅವರು ತಿಳಿಸಿದರು.

ಸಭೆಯಲ್ಲಿ ಜಿ.ಪಂ. ಸಿಇಓ ಹಾಗೂ ಎಂ.ಸಿ.ಸಿ ನೋಡಲ್ ಅಧಿಕಾರಿಗಳಾದ ಎಸ್.ಜೆ. ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಧಿಕಾರಿ ಎಂ.ಕಾರ್ತಿಕ್ ಸೇರಿದಂತೆ ವಿವಿಧ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು, ಚುನಾವಣಾ ತಹಶೀಲ್ದಾರ್ ಎಲ್. ಜಯಣ್ಣ, ಜಿಲ್ಲಾ ಜೆಡಿಎಸ್ ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿ ನಾಯಕ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಜಿಲ್ಲಾ ಬಿಜೆಪಿ ಕಾರ್ಯಕಾರಣಿ ಸಮಿತಿ ಸದಸ್ಯ ಯಶವಂತ್ ಕುಮಾರ್, ನರೇಂದ್ರ ಹೆಚ್., ಸಿಪಿಐ (ಎಂ) ಪಕ್ಷದ ಡಿಇಓ ಗೌಸ್‌ಪೀರ್, ಸಿಪಿಐ ಪಕ್ಷದ ಕೆ.ಇ. ಸತ್ಯಕೀರ್ತಿ, ಬಿಎಸ್‌ಪಿ ಜಿಲ್ಲಾ ಅಧ್ಯಕ್ಷ ಎನ್.ಪ್ರಕಾಶ್ ಸೇರಿದಂತೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಲೋಕಸಭಾ ಚುನಾವಣೆ-2024 ಮತದಾರ ಜಾಗೃತಿ ಹಾಟ್ ಏರ್ ಬಲೂನ್ ಹಾರಾಟ



» **ದಾವಣಗೆರೆ**

ಪ್ರಜಾಪ್ರಭುತ್ವದಲ್ಲಿ ಎಲ್ಲರ ಸಹಭಾಗಿತ್ವ ಅವಶ್ಯಕ, ಎಲ್ಲರೂ ಲೋಕಸಭಾ ಚುನಾವಣಾ ಹಬ್ಬದಲ್ಲಿ ಭಾಗವಹಿಸುವ ಮೂಲಕ ಪ್ರಜಾತಂತ್ರ ಆರಾಧಿಸಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಕರೆ ನೀಡಿದರು. ಅವರು ಶನಿವಾರ ನಗರದ ಹೈಸ್ಕೂಲ್ ಮೈದಾನದಲ್ಲಿ ಜಿಲ್ಲಾ ಸ್ವೀಪ್ ಸಮಿತಿ, ಯುವಜನ ಕ್ರೀಡಾ ಇಲಾಖೆ ಹಾಗೂ ಮಾ ಸಾಹಸ ಕ್ರೀಡಾ ಅಕಾಡೆಮಿ ಸಹಭಾಗಿತ್ವದಲ್ಲಿ ಮತದಾರರ ಜಾಗೃತಿಗೆ ಆಯೋಜಿಸಲಾದ ಹಾಟ್ ಏರ್ ಬಲೂನ್ ತರಬೇತಿಗೆ ಚಾಲನೆ ನೀಡಿ ಖುದ್ದು ಹಾರಾಟದಲ್ಲಿ ಭಾಗವಹಿಸಿ ಮಾತನಾಡಿದರು. ಲೋಕಸಭಾ ಚುನಾವಣೆ ನಡೆಯುತ್ತಿದ್ದು ದಾವಣಗೆರೆ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿದೆ. ಯುವ ಮತದಾರರು ಏಪ್ರಿಲ್ 9 ರೊಳಗಾಗಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರ್ಪಡೆ ಮಾಡುವ ಮೂಲಕ ಚುನಾವಣೆಯಲ್ಲಿ ಮತ ಚಲಾಯಿಸಬೇಕೆಂದರು. ಒಂದು ಮತ ಅನೇಕ ಅಶ್ವಶಕ್ತಿಗೆ ಸಮವಾಗಿದ್ದು ಯಾರು ಸಹ ಮತದಾನದಿಂದ ಹೊರಗುಳಿಯದೇ ಮತದಾನ ಮಾಡಬೇಕೆಂದ ಅವರು ಮಾರ್ಚ್ 17 ರಂದು ಹಾಟ್ ಏರ್ ಬಲೂನ್ ತರಬೇತಿ ನಡೆಯಲಿದ್ದು ಇದರ ಸದುಪಯೋಗ ಮಾಡಿಕೊಳ್ಳಬೇಕೆಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಮತದಾರರ ಪಟ್ಟಿಯನ್ನು ಅವಲೋಕಿಸಿ ಸೇರ್ಪಡೆ ಮಾತ್ತು ತಿದ್ದುಪಡಿ ಇದ್ದಲ್ಲಿ ಏಪ್ರಿಲ್ 9 ರೊಳಗಾಗಿ ಸಲ್ಲಿಸಬಹುದು. ಮತ್ತು ಚುನಾವಣೆಗೆ ಸಂಬಂಧಿಸಿದ ಸಹಾಯಕ್ಕಾಗಿ 1950 ಟೋಲ್‌ಫ್ರೀ ಸಂಖ್ಯೆಗೆ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ ಎಂದರು. ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಕೊಟ್ರೇಶ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ, ಯುವಜನ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಜಯಲಕ್ಷ್ಮಿಬಾಯಿ, ಯುವ ಪ್ರಶಸ್ತಿ ಪುರಸ್ಕೃತ ಮಾಗನಹಳ್ಳಿ ಮಂಜುನಾಥ್ ಉಪಸ್ಥಿತರಿದ್ದರು.

### ಭರಮಸಾಗರ ಬಸ್ ನಿಲ್ದಾಣದಲ್ಲಿ ಕೋಟಿ ರೂ.ವೆಚ್ಚದ ಸಿ.ಸಿ. ರಸ್ತೆ ಕಾಮಗಾರಿಗೆ ಚಾಲನೆ



» **ಹೊಳಲ್ಕೆರೆ**

ಎರಡು ಮೂರು ತಿಂಗಳಾದರೂ ಕೆ.ಎಸ್.ಆರ್.ಟಿ.ಸಿ. ನೌಕರರಿಗೆ ಸಂಬಳ ಸಿಗುತ್ತಿರಲಿಲ್ಲ. ನಾನು ಕೆ.ಎಸ್.ಆರ್.ಟಿ.ಸಿ. ಅಧ್ಯಕ್ಷನಾದಾಗ ಪ್ರತಿ ತಿಂಗಳು ಒಂದನೆ ತಾರೀಖಿನಂದು ಸಿಬ್ಬಂದಿಗಳಿಗೆ ವೇತನ ಸಿಗುವಂತಾಯಿತು ಎಂದು ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ಹೇಳಿದರು.ಭರಮಸಾಗರ ಬಸ್ ನಿಲ್ದಾಣದ ಆವರಣದಲ್ಲಿ ಒಂದು ಕೋಟಿ ರೂ.ವೆಚ್ಚದಲ್ಲಿ ಸಿ.ಸಿ. ರಸ್ತೆ ಕಾಮಗಾರಿಗೆ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು.


2010 ರಲ್ಲಿ ಈ ಜಾಗದಲ್ಲಿ ಬಹಳಷ್ಟು ತಕರಾರಿತ್ತು. ಎಲ್ಲವನ್ನು ಬಗೆಹರಿಸಿ ಮೂರನೆ ಬಾರಿಗೆ ಶಾಸಕನಾದಾಗ ಉದ್ಘಾಟಿಸಿದ್ದೆ. ದಾವಣಗೆರೆಯಲ್ಲಿ 126 ಕೋಟಿ ರೂ.ವೆಚ್ಚದಲ್ಲಿ ಬಸ್‌ನಿಲ್ದಾಣ, ಹೊಳಲ್ಕೆರೆಯಲ್ಲಿ ಹತ್ತು ಕೋಟಿ, ತುಮಕೂರಿನಲ್ಲಿ ನೂರು ಕೋಟಿ ರೂ.ವೆಚ್ಚದಲ್ಲಿ ಬಸ್‌ನಿಲ್ದಾಣ ನಿರ್ಮಾಣವಾಗಿದೆ. ಚಿತ್ರದುರ್ಗದಲ್ಲಿ ಎಂಬತ್ತು ಕೋಟಿ ರೂ.ವೆಚ್ಚದಲ್ಲಿ ಬಸ್‌ನಿಲ್ದಾಣ ಕಟ್ಟಬೇಕೆಂದು ನಲವತ್ತು ಕೋಟಿ ರೂ.ಗಳನ್ನು ಮಂಜೂರು ಮಾಡಿಸಿದ್ದೇನೆ. ನನ್ನ ಕಾಲದಲ್ಲಿ ಎಲೆಕ್ಟ್ರಿಕ್ ಬಸ್‌ಗಳನ್ನು ಖರೀಧಿಸಲಾಯಿತು ಎಂದು ತಿಳಿಸಿದರು.

# ಚಿತ್ರದುರ್ಗ ಲೋಕಸಭಾ ಕ್ಷೇತ್ರ ಒಂದು ಹಿನ್ನೋಟ

» **ಚಿತ್ರದುರ್ಗ**

ಕೋಟೆಗಳ ನಾಡು ಎಂದೇ ಖ್ಯಾತಿ ಹೊಂದಿರುವ ಚಿತ್ರದುರ್ಗ ಜಿಲ್ಲೆಯು ಐತಿಹಾಸಿಕವಾಗಿ ಪ್ರಾಮುಖ್ಯತೆ ಪಡೆದಿದ್ದು, ಇಂತಹ ಚಿತ್ರದುರ್ಗ ಜಿಲ್ಲೆಯಲ್ಲಿ 1952 ರಿಂದ 2019 ವರೆಗಿನ ಲೋಕಸಭಾ ಚುನಾವಣಾ ಇತಿಹಾಸವನ್ನು ಗಮನಿಸಿದಾಗ ಚುನಾವಣೆಯಿಂದ ಚುನಾವಣೆಗೆ ಜಿದ್ದಾ ಜಿದ್ದಿನ ಸ್ಪರ್ಧೆ ನಡೆದಿರುವುದು ವಿಶೇಷ. ಇದೀಗ ಮತ್ತೊಮ್ಮೆ ಲೋಕಸಭೆಗೆ ಚುನಾವಣೆ ಘೋಷಣೆಯಾಗಿದ್ದು, ಬೇಸಿಗೆಯ ಬಿಸಿ ಏರುತ್ತಿರುವಂತೆಯೇ, ಚುನಾವಣಾ ಕಣ ರಂಗೇರುತ್ತಿದೆ.

ಚಿತ್ರದುರ್ಗ ಲೋಕಸಭಾ ಕ್ಷೇತ್ರವು ಸದ್ಯ ಮೊಳಕಾಲ್ಮೂರು, ಚಳ್ಳಕೆರೆ, ಚಿತ್ರದುರ್ಗ, ಹಿರಿಯೂರು, ಹೊಸದುರ್ಗ, ಹೊಳಲ್ಕೆರೆ ವಿಧಾನಸಭಾ ಕ್ಷೇತ್ರಗಳು ಅಲ್ಲದೆ, ನೆರೆಯ ತುಮಕೂರು ಜಿಲ್ಲೆಯ ಸಿರಾ ಹಾಗೂ ಪಾವಗಡ ಸೇರಿದಂತೆ ಒಟ್ಟು 08 ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದೆ






**ಇತ್ತೀಚೆಗೆ ನಡೆದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮದ ನಂತರ**

| ಕ್ಷೇತ್ರ | ಪುರುಷ | ಮಹಿಳೆ | ಇತರೆ | ಒಟ್ಟು ಮತದಾರರು |
|---|---|---|---|---|
| ಮೊಳಕಾಲ್ಮೂರು | 125058 | 124181 | 13 | 230560 |
| ಚಳ್ಳಕೆರೆ | 110448 | 112106 | 06 | 222560 |
| ಚಿತ್ರದುರ್ಗ | 129809 | 134398 | 41 | 251312 |
| ಹಿರಿಯೂರು | 121502 | 124210 | 16 | 233775 |
| ಹೊಸದುರ್ಗ | 99860 | 99596 | 01 | 199457 |
| ಹೊಳಲ್ಕೆರೆ | 118219 | 118737 | 10 | 236966 |
| ಸಿರಾ | 113788 | 112898 | 08 | 226694 |
| ಪಾವಗಡ | 100380 | 96643 | 09 | 197032 |

ಮತದಾರರಿದ್ದಾರೆ. ನಾಮಪತ್ರ ಸಲ್ಲಿಕೆಗೆ ಕೊನೆಯ ದಿನದವರೆಗೂ ಅರ್ಹರು ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ಅವಕಾಶವಿದೆ,.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸದ್ಯ ಪುರುಷ– 919064, ಮಹಿಳೆ–922769, ಇತರೆ–104 ಸೇರಿದಂತೆ ಒಟ್ಟು 18,41,937 ಮತದಾರರಿದ್ದಾರೆ. 2019 ರಲ್ಲಿ ಜರುಗಿದ ಚುನಾವಣೆ ಸಂದರ್ಭದಲ್ಲಿ ಪುರುಷ– 889236, ಮಹಿಳೆ–870772, ಇತರೆ–103 ಸೇರಿದಂತೆ ಒಟ್ಟು 17,60,111 ಮತದಾರರಿದ್ದರು. ಕಳೆದ ಲೋಕಸಭೆ ಚುನಾವಣೆಗಿಂತಲೂ ಈ ಬಾರಿ 81886 ಹೆಚ್ಚು ಮತದಾರರು ಮತ ಚಲಾಯಿಸುವ ಹಕ್ಕು ಪಡೆದಿದ್ದಾರೆ. 18 ವರ್ಷ ವಯಸ್ಸು ಪೂರ್ಣಗೊಂಡ ಎಲ್ಲರೂ ಮತದಾರರ ಪಟ್ಟಿಗೆ ತಮ್ಮ ಹೆಸರು ಸೇರ್ಪಡೆಗೊಳಿಸುವಂತೆ ಚುನಾವಣಾ ಆಯೋಗ ಉತ್ತೇಜನ ನೀಡಲು ಕೈಗೊಂಡ ಹಲವು ಕ್ರಮಗಳಿಂದಾಗಿ ಯುವ ಮತದಾರರ ಸಂಖ್ಯೆಯಲ್ಲಿ ಹೆಚ್ಚಳವಾಗಲು ಸಾಧ್ಯವಾಗಿದೆ.

ಭಾರತ ದೇಶದ ಸ್ವಾತಂತ್ರ್ಯಾ ನಂತರ 1952 ರಲ್ಲಿ ದೇಶದಲ್ಲಿ ಜರುಗಿದ ಮೊದಲ ಚುನಾವಣೆ ಸಂದರ್ಭದಲ್ಲಿ ಚಿತ್ರದುರ್ಗ ಕ್ಷೇತ್ರದಲ್ಲಿ ನಡೆದ ಪ್ರಥಮ ಲೋಕಸಭಾ ಚುನಾವಣೆಯಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದ ಎಸ್. ನಿಜಲಿಂಗಪ್ಪ ಅವರು ಕಿಸಾನ್ ಮಜ್ದೂರ್ ಪ್ರಜಾ ಪಾರ್ಟಿ (ಕೆಎಂಪಿಪಿ) ಅಭ್ಯರ್ಥಿ ಜೆ. ಮರುಳಪ್ಪ ಅವರನ್ನು 79152 ಮತಗಳ ಅಂತರದಿಂದ ಸೋಲಿಸಿ ಆಯ್ಕೆಯಾಗಿದ್ದರು. ಪಕ್ಷೇತರ ಅಭ್ಯರ್ಥಿಯಾಗಿದ್ದ ಹೆಚ್.ಎಸ್. ವೆಂಕಟಾಚಲಯ್ಯ ಅವರು 44211 ಮತಗಳನ್ನು ಗಳಿಸಿದ್ದರು. 1957 ರಲ್ಲಿ ನಡೆದ ಎರಡನೆ ಲೋಕಸಭಾ ಚುನಾವಣೆಯಲ್ಲಿ ಭಾರತೀಯ ಪ್ರಜಾ ಸೋಶಿಯಲಿಸ್ಟ್ ಪಕ್ಷ (ಪಿಎ[illegible]ಪಿ) ದಿಂದ ಸ್ಪರ್ಧಿಸಿದ್ದ ಜೆ.ಎಂ. ಮಹ್ಮದ್ ಇಮಾಮ್ ಅವರು ಕಾಂಗ್ರೆಸ್ ಪಕ್ಷದ ಎಸ್. ರಂಗರಾವ್ ಅವರಿಗಿಂತ 11,159 ಹೆಚ್ಚು ಮತಗಳನ್ನು ಪಡೆದು ವಿಜಯಿಯಾದರು. ಆದರೆ 1962 ರಲ್ಲಿ ನಡೆದ ಚುನಾವಣೆಯಲ್ಲಿ ಎಸ್. ವೀರಬಸಪ್ಪ ಅವರು ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿ ಪ್ರಜಾ ಸೋಶಿಯಲಿಸ್ಟ್ ಪಕ್ಷದ ಅಭ್ಯರ್ಥಿಯಾದ ಜೆ. ಬಸಪ್ಪ ಅವರನ್ನು 44849 ಮತಗಳ ಅಂತರದಿಂದ ಪರಾಭವಗೊಳಿಸಿ ಆಯ್ಕೆಯಾದರು. ಈ ಚುನಾವಣೆಯಲ್ಲಿ ಎಸ್. ವೀರಬಸಪ್ಪ ಅವರು 172673 ಮತಗಳನ್ನು ಗಳಿಸಿದರೆ, ಜೆ. ಬಸಪ್ಪ ಅವರು 127824 ಮತಗಳನ್ನು ಪಡೆದರು. ಉಳಿದಂತೆ ಪಕ್ಷೇತರ ಅಭ್ಯರ್ಥಿ ಸಿ. ರಂಗಯ್ಯ ಅವರು ಕೇವಲ 16515 ಮತಗಳನ್ನು ಗಳಿಸಿದರು.

1967 ರ ಚುನಾವಣೆಯಲ್ಲಿ ಸ್ವತಂತ್ರ ಪಾರ್ಟಿ ಅಭ್ಯರ್ಥಿಯಾಗಿ ಪುನಃ ಸ್ಪರ್ಧಿಸಿದ ಜೆ.ಎಂ. ಮಹ್ಮದ್ ಇಮಾಮ್ ಅವರು ಕಾಂಗ್ರೆ[illegible]ನ ಎಸ್. ವೀರಬಸಪ್ಪ ಅವರಿಗಿಂತ 31932 ಹೆಚ್ಚು ಮತಗಳನ್ನು ಗಳಿಸಿ ಆಯ್ಕೆಯಾದರು, ಈ ಚುನಾವಣೆಯಲ್ಲಿ ಸಿ. ರಂಗಯ್ಯ ಹಾಗೂ ಪಿ.ಹೆಚ್. ಜಯದೇವಪ್ಪ ಅವರು ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದರು. 1971 ರ ಚುನಾವಣೆಯಲ್ಲಿ ಎನ್.ಪಿ.ಜೆ. ಪಕ್ಷದಿಂದ ಸ್ಪರ್ಧಿಸಿದ ಕೊಂಡಜ್ಜಿ ಬಸಪ್ಪ ಅವರು ಸ್ವತಂತ್ರ ಪಾರ್ಟಿಯ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಜೆ.ಎಂ. ಮಹ್ಮದ್ ಇಮಾಮ್ ಅವರನ್ನು 169702 ಮತಗಳ ಬೃಹತ್ ಅಂತರದಿಂದ ಪರಾಭವಗೊಳಿಸಿ ವಿಜಯಶಾಲಿಯಾದರು. ಈ ಚುನಾವಣೆಯಲ್ಲಿ ಪಕ್ಷೇತರರಾಗಿ ಸ್ಪರ್ಧಿಸಿದ ರಂಗಯ್ಯ ಅವರು ಮೂರನೆ ಸ್ಥಾನ ಪಡೆದರು. 1977 ರ ಲೋಕಸಭಾ ಚುನಾವಣೆಯಲ್ಲಿ ಕೆ. ಮಲ್ಲಣ್ಣ ಅವರು ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿ ಮೊದಲ ಬಾರಿಗೆ ಆಯ್ಕೆಯಾದರು. ಈ ಚುನಾವಣೆಯಲ್ಲಿ ಅವರು ಭಾರತೀಯ ಲೋಕದಳ ಪಕ್ಷದ ಅಭ್ಯರ್ಥಿ ಹೆಚ್.ಸಿ. ಬೋರಯ್ಯ ಅವರಿಗಿಂತ 86654 ಹೆಚ್ಚು ಮತಗಳನ್ನು ಪಡೆದು ಆಯ್ಕೆಯಾದರು, ಪಕ್ಷೇತರ ಅಭ್ಯರ್ಥಿ ಚಂದ್ರಶೇಖರಯ್ಯ ಮೂರನೆ ಸ್ಥಾನಕ್ಕೆ ತೃಪ್ತಿಪಟ್ಟರು. 1980 ರ ಚುನಾವಣೆಯಲ್ಲಿ ಪುನಃ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿದ ಕೆ. ಮಲ್ಲಣ್ಣ ಅವರು ಜನತಾ ಪಕ್ಷದ ಅಭ್ಯರ್ಥಿ ಬಿ.ಎಲ್. ಗೌಡ ಅವರನ್ನು 109361 ಮತಗಳಿಂದ ಸೋಲಿಸಿ ಎರಡನೆ ಬಾರಿ ಆಯ್ಕೆಯಾದರು, ಈ ಚುನಾವಣೆಯಲ್ಲಿ ಕಾಂಗ್ರೆಸ್(ಯು) ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಹೆಚ್.ಸಿ. ಬೋರಯ್ಯ ಮೂರನೆ ಸ್ಥಾನ ಹಾಗೂ ಜನತಾ (ಎಸ್)ನ ಸಿ.ಆರ್. ಬಸಪ್ಪ ನಾಲ್ಕನೆ ಸ್ಥಾನ ಗಳಿಸಿದರು. ಮತ್ತೆ 1984 ರಲ್ಲಿ ನಡೆದ ಚುನಾವಣೆಯಲ್ಲಿ ಕೆ.ಹೆಚ್. ರಂಗನಾಥ್ ಅವರು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿ ಜನತಾ ಪಕ್ಷದ ಅಭ್ಯರ್ಥಿ ಬಿ.ಎಲ್. ಗೌಡ ಅವರನ್ನು 56811 ಮತಗಳಿಂದ ಪರಾಭವಗೊಳಿಸಿ ಆಯ್ಕೆಯಾದರು. ಈ ಚುನಾವಣೆಯಲ್ಲಿ ಒಟ್ಟು 11 ಅಭ್ಯರ್ಥಿಗಳು ಕಣದಲ್ಲಿದ್ದರು.

1989 ರಲ್ಲಿ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ. ಮೂಡಲಗಿರಿಯಪ್ಪ ಅವರು ತಮ್ಮ ಪ್ರತಿಸ್ಪರ್ಧಿಯಾದ ಜನತಾದಳ ಪಕ್ಷದ ಅಭ್ಯರ್ಥಿ ಸಣ್ಣ ಚಿಕ್ಕಪ್ಪ ಅವರನ್ನು 142193 ಮತಗಳ ಬೃಹತ್ ಅಂತರದಿಂದ ಪರಾಭವಗೊಳಿಸಿ ವಿಜಯದ ನಗೆ ಬೀರಿದರು. ಈ ಚುನಾವಣೆಯಲ್ಲಿ ಒಟ್ಟು 6 ಅಭ್ಯರ್ಥಿಗಳು ಸ್ಪರ್ಧಿಸಿದ್ದರು.. 1991 ರ ಚುನಾವಣೆಯಲ್ಲಿ ಮತ್ತೆ ಸಿ.ಪಿ. ಮೂಡಲಗಿರಿಯಪ್ಪ ಅವರು ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿ ತಮ್ಮ ಸಮೀಪದ ಪ್ರತಿಸ್ಪರ್ಧಿ ಬಿಜೆಪಿ ಪಕ್ಷದ ಎಲ್.ಜಿ. ಹಾವನೂರು ಅವರನ್ನು 82512 ಮತಗಳ ಅಂತರದಿಂದ ಸೋಲಿಸಿ ಎರಡನೆ ಬಾರಿಗೆ ಆಯ್ಕೆಯಾದರು. ಈ ಚುನಾವಣೆಯಲ್ಲಿ ಒಟ್ಟು 07 ಅಭ್ಯರ್ಥಿಗಳು ಸ್ಪರ್ಧಿಸಿದ್ದರು. ಅತ್ಯಂತ ಜಿದ್ದಾಜಿದ್ದಿಯಿಂದ ಕೂಡಿದ್ದ 1996 ರ ಚುನಾವಣೆಯಲ್ಲಿಜನತಾದಳಪಕ್ಷದಅಭ್ಯರ್ಥಿಯಾಗಿ ಸ್ಪರ್ಧಿಸಿದ ಪಿ. ಕೋದಂಡರಾಮಯ್ಯ ಅವರು ತಮ್ಮ ಪ್ರತಿಸ್ಪರ್ಧಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿದ ಸಿ.ಪಿ. ಮೂಡಲಗಿರಿಯಪ್ಪ ಅವರನ್ನು 19382 ಮತಗಳ ಅಂತರದಿಂದ ವಿಜಯಿಯಾದರು. ಈ ಚುನಾವಣೆಯಲ್ಲಿ ಬರೋಬ್ಬರಿ 17 ಅಭ್ಯರ್ಥಿಗಳು ಚುನಾವಣೆ ಕಣದಲ್ಲಿದ್ದರು. 1998 ರ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ. ಮೂಡಲಗಿರಿಯಪ್ಪ ಅವರು ಲೋಕಶಕ್ತಿ ಪಕ್ಷದ ಅಭ್ಯರ್ಥಿ ಪಿ. ಕೋದಂಡರಾಮಯ್ಯ ಅವರನ್ನು 58321 ಮತಗಳಿಂದ ಪರಾಭವಗೊಳಿಸಿ ಮೂರನೆ ಬಾರಿ ಲೋಕಸಭಾ ಸದಸ್ಯರಾಗಿ ಆಯ್ಕೆಯಾದರು. 1999 ರ ಚುನಾವಣೆಯಲ್ಲಿ ನಡೆದ ತುರುಸಿನ ಸ್ಪರ್ಧೆಯಲ್ಲಿ ಕನ್ನಡ ಚಲನ ಚಿತ್ರರಂಗದ ನಟ ಶಶಿಕುಮಾರ್ ಅವರು ಜನತಾದಳ (ಯು) ಪಕ್ಷದಿಂದ ಸ್ಪರ್ಧಿಸಿ, ತಮ್ಮ ಸಮೀಪದ ಪ್ರತಿಸ್ಪರ್ಧಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿದ ಸಿ.ಪಿ. ಮೂಡಲಗಿರಿಯಪ್ಪ ಅವರನ್ನು ಕೇವಲ 11178 ಮತಗಳ ಅಂತರದಿಂದ ಪರಾಭವಗೊಳಿಸಿ ಆಯ್ಕೆಯಾದರು. 2004 ರಲ್ಲಿ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎನ್.ವೈ. ಹನುಮಂತಪ್ಪ ಅವರು ಜನತಾದಳ (ಜಾತ್ಯತೀತ) ಪಕ್ಷದ ಅಭ್ಯರ್ಥಿ ಪಿ. ಕೋದಂಡರಾಮಯ್ಯ ಅವರಿಗಿಂತ 37460 ಹೆಚ್ಚು ಮತಗಳನ್ನು ಪಡೆದು ಆಯ್ಕೆಯಾಗಿದ್ದರು. ಈ ಚುನಾವಣೆಯಲ್ಲಿ ಒಟ್ಟು 06 ಅಭ್ಯರ್ಥಿಗಳು ಕಣದಲ್ಲಿದ್ದರು. 2009 ರಲ್ಲಿ ಜರುಗಿದ ಚುನಾವಣೆಯಲ್ಲಿ ಬಿಜೆಪಿ ಅಭ್ಯಥಿಯಾಗಿ ಸ್ಪರ್ಧಿಸಿದ ಜನಾರ್ಧನಸ್ವಾಮಿ ಅವರು, ಕಾಂಗ್ರೆ[illegible]ನ ಬಿ. ತಿಪ್ಪೇಸ್ವಾಮಿ ಅವರಿಗಿಂತ 135656 ಮತಗಳ ಅಂತರದಿಂದ ಜಯಶಾಲಿಯಾದರು. ಈ ಚುನಾವಣೆಯಲ್ಲಿ ಒಟ್ಟು 11 ಅಭ್ಯರ್ಥಿಗಳು ಚುನಾವಣಾ ಕಣದಲ್ಲಿದ್ದರು. 2014 ರಲ್ಲಿ ಜರುಗಿದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿದ್ದ ಬಿ.ಎಂ. ಚಂದ್ರಪ್ಪ ಅವರು, ತಮ್ಮ ಸಮೀಪದ ಪ್ರತಿಸ್ಪರ್ಧಿ ಬಿಜೆಪಿ ಪಕ್ಷದ ಜನಾರ್ಧನಸ್ವಾಮಿ ಅವರನ್ನು 101291 ಮತಗಳ ಅಂತರದಿಂದ ಪರಾಭವಗೊಳಿಸಿ ಆಯ್ಕೆಯಾದರು. ಈ ಚುನಾವಣೆಯಲ್ಲಿ 14 ಅಭ್ಯರ್ಥಿಗಳು ಸ್ಪರ್ಧಿಸಿದ್ದರು. ಈ ಚುನಾವಣೆಯಲ್ಲಿ ನೋಟಾ ಗೆ ಒಟ್ಟು 8895 ಮತಗಳು ಚಲಾವಣೆಯಾಗಿದ್ದವು.

2019 ರಲ್ಲಿ ಜರುಗಿದ ಚುನಾವಣೆಯಲ್ಲಿ ಬಿಜೆಪಿ ಪಕ್ಷದಿಂದ ಸ್ಪರ್ಧಿಸಿದ್ದ ಎ. ನಾರಾಯಣಸ್ವಾಮಿ ಅವರು, ತಮ್ಮ ಸಮೀಪದ ಪ್ರತಿಸ್ಪರ್ಧಿ ಕಾಂಗ್ರೆಸ್ ನ ಬಿ.ಎನ್. ಚಂದ್ರಪ್ಪ ಅವರಿಗಿಂತ 80,178 ಹೆಚ್ಚು ಮತಗಳನ್ನು ಪಡೆದು ಆಯ್ಕೆಯಾಗಿದ್ದರು. ಈ ಚುನಾವಣೆಯಲ್ಲಿ ಒಟ್ಟು 19 ಅಭ್ಯರ್ಥಿಗಳು ಸ್ಪರ್ಧಿಸಿದ್ದರು. ಚುನಾವಣೆಯಲ್ಲಿ ನೋಟಾಗೆ ಒಟ್ಟು 4368 ಮತಗಳು ಚಲಾವಣೆಯಾಗಿದ್ದವು. ಚುನಾವಣೆಯಲ್ಲಿ ಶೇ. 70.64 ರಷ್ಟು ಮತದಾನವಾಗಿತ್ತು.

ಈ ಬಾರಿಯ ಚುನಾವಣೆಯು ಶಾಂತಿ ಹಾಗೂ ನ್ಯಾಯಯುತವಾಗಿ ನಡೆಯಲು ಬೇಕಾದ ಅಗತ್ಯ ಸಿದ್ಧತೆಗಳನ್ನು ಚಿತ್ರದುರ್ಗ ಜಿಲ್ಲಾ ಚುನಾವಣಾ ಅಧಿಕಾರಿ ಟಿ. ವೆಂಕಟೇಶ್ ಅವರ ನೇತೃತ್ವದಲ್ಲಿ ಕೈಗೊಂಡಿದ್ದು, ಏ. 26 ರಂದು ಮತದಾನ ನಡೆಯಲಿದೆ. ಎಲ್ಲ ಅರ್ಹ ಮತದಾರರು, ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರಿದೆಯೇ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು. ಅಲ್ಲದೆ ಮತದಾನ ದಿನದಂದು ತಪ್ಪದೆ ಮತಗಟ್ಟೆಗೆ ತೆರಳಿ ಮತದಾನ ಮಾಡುವ ಮೂಲಕ ಪ್ರಜಾ ಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಬೇಕೆಂಬುದು ಚುನಾವಣಾ ಆಯೋಗದ ಆಶಯವಾಗಿದೆ.

## ಪ್ರಮುಖ ಸುದ್ದಿ

### ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ದೂರುಗಳಿಗೆ ಅವಕಾಶ ಬರಂದತೆ ಚುನಾವಣೆ ಕಾರ್ಯ ನಿರ್ವಹಿಸಿ

» **ಚಿತ್ರದುರ್ಗ**

ಚಿತ್ರದುರ್ಗ ಲೋಕಸಭಾ ಚುನಾವಣೆ ವೇಳಾಪಟ್ಟಿ ಬಿಡುಗಡೆಯಾಗಿದೆ. ನೀತಿ ಸಂಹಿತೆ ತಕ್ಷಣದಿಂದಲೇ ಜಾರಿಗೆ ಬಂದಿದ್ದು, ಯಾವುದೇ ದೂರುಗಳಿಗೆ ಅವಕಾಶ ಬರದಂತೆ ಅಧಿಕಾರಿಗಳು ಚುನಾವಣೆ ಕಾರ್ಯ ನಿರ್ವಹಿಸುವಂತೆ ಲೋಕಸಭಾ ಚುನಾವಣಾಧಿಕಾರಿಯಾಗಿರುವ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಈ ಕುರಿತು ಎಲ್ಲಾ ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು.ನೀತಿ ಸಂಹಿತೆ ಹಿನ್ನಲೆಯಲ್ಲಿ ತಕ್ಷಣದಿಂದಲೇ ಜಿಲ್ಲಾ ಪಂಚಾಯಿತಿ ಸಿಇಓ, ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರು, ಸಹಾಯಕ ಚುನಾವಣಾಧಿಕಾರಿಗಳು, ತಹಶೀಲ್ದಾರರು, ನಗರ ಸ್ಥಳೀಯ ಸಂಸ್ಥೆಗಳ ಆಯುಕ್ತರು ಹಾಗೂ ಮುಖ್ಯಾಧಿಕಾರಿಗಳು, ಸರ್ಕಾರಿ, ವಿವಿಧ ಪಕ್ಷಗಳು ಹಾಗೂ ರಾಜಕೀಯ ವ್ಯಕ್ತಿಗಳಿಗೆ ಸಂಬಂಧಿಸಿದ ಅನಧಿಕೃತ ಗೋಡೆ ಬರಹ, ಬಿತ್ತಿ ಚಿತ್ರಗಳು, ಬ್ಯಾನರ್ ಹಾಗೂ ಬಂಟಿಗ್ ಸೇರಿದಂತೆ ಹೋರ್ಡಿಂಗ್‌ಗಳನ್ನುತೆರವುಗೊಳಿಸಬೇಕು. ಈ ಕುರಿತು ಚುನಾವಣೆ ಆಯೋಗಕ್ಕೆ ಸೂಕ್ತ ನಮೂನೆಯಲ್ಲಿ ಸಕಾಲದಲ್ಲಿ ಮಾಹಿತಿ ಒದಗಿಸಬೇಕು. ಅಂತರಾಜ್ಯ ಗಡಿಯ ಚೆಕ್‌ಪೋಸ್ಟ್‌ಗಳು ಈಗಾಗಲೇ ಕಾರ್ಯ ನಿರ್ವಹಿಸುತ್ತಿವೆ. ಜಿಲ್ಲಾ ವ್ಯಾಪ್ತಿಯಲ್ಲಿನ ಹಾಗೂ ವಿವಿಧ ಕಡೆ ನಿರ್ಮಿಸಲಾಗಿರುವ ಚೆಕ್ ಪೋಸ್ಟ್ ಮಾರ್ಚ್ 17 ರಿಂದಲೇ ಕಾರ್ಯಾರಂಭ ಮಾಡಬೇಕು. ಸಹಾಯಕ ಚುನಾವಣಾಧಿಕಾರಿಗಳು ಹಾಗೂ ತಹಶೀಲ್ದಾರರು ಮತಗಟ್ಟೆಗಳಿಗೆ ಭೇಟಿ ನೀಡಿ ಸ್ಥಿತಿಗತಿ ಪರಿಶೀಲನೆ ನಡೆಸಬೇಕು. ರಾಜಕೀಯಪಕ್ಷಗಳುಹಾಗೂಅಭ್ಯರ್ಥಿಗಳು ಚುನಾವಣೆ ಪ್ರಚಾರಕ್ಕಾಗಿ ಸುವಿಧಾ ತಂತ್ರಾಂಶದಲ್ಲಿಯೇ ಅರ್ಜಿ ಸಲ್ಲಿಸಬೇಕು. ಇದರ ಬಗ್ಗೆ ರಾಜಕೀಯ ಪ್ರತಿನಿಧಿಗಳಿಗೆ ಸೂಕ್ತ ಮಾಹಿತಿ ನೀಡಿ. ಸರ್ಕಾರದ ಅನುದಾನದಲ್ಲಿ ನಿರ್ಮಿಸಲಾಗಿರುವ ಕಟ್ಟಡಗಳನ್ನು ಸುಪರ್ದಿಗೆ ಪಡೆಯಬೇಕು. ಈ ಸ್ಥಳಗಳಲ್ಲಿ ಯಾವುದೇ ಕಾರಣಕ್ಕೂ ರಾಜಕೀಯ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. 85 ವರ್ಷ ದಾಟಿದವರು ಹಾಗೂ ವಿಕಲಚೇತನರು ಮನೆಯಿಂದಲೇ ಮತದಾನ ಮಾಡುವಂತಾಗಲು ಅರ್ಹರಿಗೆ 12ಡಿ ಫಾರಂ ವಿತರಿಸಬೇಕು. ಮನೆಯಿಂದಲೇ ಮತದಾನಕ್ಕೆ ಇಚ್ಚಿಸುವವರ ಪಟ್ಟಿ ಸಿದ್ದಪಡಿಸಿಕೊಳ್ಳಬೇಕು. ವಿಧಾನ ಸಭಾ ಕ್ಷೇತ್ರವಾರು ಕಂಟ್ರೋಲ್ ರೂಮ್‌ಗಳನ್ನು ಸ್ಥಾಪಿಸಿ, ಕುಂದು ಕೊರತೆ, ಸಮಸ್ಯೆ ಹಾಗೂ ದೂರಗಳಿಗೆ ಸ್ಪಂದಿಸಬೇಕು. ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಎಲ್ಲಾ ಇಲಾಖೆಗಳ ಸಿಬ್ಬಂದಿ ಚುನಾವಣೆ ಕಾರ್ಯ ಕಾರ್ಯವನ್ನು ಅತ್ಯಂತ ಎಚ್ಚರಿಕೆಯಿಂದ ನಿರ್ವಹಿಸಬೇಕು. ಜಿಲ್ಲೆಯಲ್ಲಿ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಲು ಎಲ್ಲರೂ ಸಹರಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಅಧಿಕಾರಿಗಳು ಮಾದರಿ ನೀತಿ ಸಂಹಿತೆ ಉಲ್ಲಘಂನೆಯಾಗದಂತೆ ನಿಗಾವಹಿಸಬೇಕು. ಧಾರ್ಮಿಕ ಹಾಗೂ ಮದುವೆ ಮುಂಜಿ ಸೇರಿದಂತೆ ಖಾಸಗಿ ಕಾರ್ಯಗಳಿಗೆ ಅನುಮತಿ ಅಗತ್ಯವಿಲ್ಲ. ಆದರೆ ಈ ಸ್ಥಳಗಳನ್ನು ರಾಜಕೀಯ ಚಟುವಟಿಕೆಗಾಗಿ ಬಳಸಲು ಅವಕಾಶವಿಲ್ಲ. ಹೀಗಾಗಿ ಇಂತಹ ಸ್ಥಳಗಳಲ್ಲಿ ರಾಜಕೀಯ ವ್ಯಕ್ತಿಗಳು ಚುನಾವಣೆ ಪ್ರಚಾರ ನಡೆಸದಂತೆ ನಿರ್ಬಂಧ ವಿಧಿಸಬೇಕು. ಸಿ–ವಿಜಿಲ್ ತಂತ್ರಾಂಶದ ಮೂಲಕ ಬರುವ ದೂರಗಳ ಬಗ್ಗೆ ತಕ್ಷಣೆ ಸ್ಪಂದನೆ ನೀಡಬೇಕು ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T